ಸಂಪುಟ : 10 ಸಂಚಿಕೆ: 187 ಪುಟ : 4+2 ಬೆಲೆ: 3.00 ಮಂಗಳವಾರ ಸೆಪ್ಟೆಂಬರ್ 02 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 187 Pages : 4+2 Price : 3.00 Tuesday September 02 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದು ಅನ್ನಸಂತರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಪಂಚಮೂರ್ತಿ ಹಾಗೂ ನವಗ್ರಹ ಯುವಕ ಮಂಡಳಿ, ಬಸವೇಶ್ವರ ನಗರ, ಗದಗ ವತಿಯಿಂದ ದಿನಾಂಕ 02–09–2025 ರಂದು ಮಹಾ ರುದ್ರಾಭಿಷೇಕ ಹಾಗೂ ಮಧ್ಯಾನ 1 ಘಂಟೆಗೆ ಮಹಾ ಅನ್ನಸಂತರ್ಪಣೆ ಜರುಗಲಿದ್ದು, ಎಲ್ಲ ಭಕ್ತಾದಿಗಳು ಬಂದು ಪ್ರಸಾದ ಸ್ವೀಕರಿಸಿ ಭಗವಂತನ ಕೃಪೆಗೆ ಪಾತ್ರರಾಗಬೇಕು ಪತ್ರಿಕಾ ಪ್ರಕಟಣೆಯಲ್ಲಿ ಸಂಘಟಕರು ಕೋರಿದ್ದಾರೆ.



## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಸೇನೆ/ಇತರೆ ಯುನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಹಿಂದುಳಿದ ವರ್ಗಗಳ ಪ್ರ ವರ್ಗ–1, 2 ಎ, 3 ಎ , 3ಬಿ ಅರ್ಹ ಅಭ್ಯರ್ಥಿಗಳಿಗೆ ಕಲಬುರಗಿ ಜಿಲ್ಲಾ ಕೇಂದ್ರದಲ್ಲಿ ಉಚಿತವಾಗಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 10 ಆಗಿದ್ದು, ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ , ಕಲಬುರಗಿ ಇಲ್ಲಿ ಸಂಪರ್ಕಿಸಬಹುದಾಗಿದೆ.

### ಮತ್ಸ್ಯ ಸಂಜೀವಿನಿ ಯೋಜನೆಯ ತರಬೇತಿ ಶಿಬಿರ ಉದ್ಘಾಟಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ

# ಪ್ರಯೋಗಾತ್ಮಕ ಕಲಿಕೆ ಶ್ಲಾಘನೀಯ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮಗ್ರ ಮೀನುಗಾರಿಕೆ ಸಾಕಾಣಿಕೆ ಗ್ರಾಮೀಣ ಮಹಿಳೆಯರ ಸ್ವಾವಲಂಬನೆಯತ್ತ ಸಾಗಲು ಇರುವ ಮಹತ್ತರ ಹೆಜ್ಜೆಯಾಗಿದ್ದು, ಪ್ರಯೋಗಾತ್ಮಕವಾಗಿ ಮೀನುಗಾರಿಕೆ ಕಲಿಕೆಯನ್ನು ಒದಗಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅಭಿಪ್ರಾಯಪಟ್ಟರು.

ಗದಗ ತಾಲೂಕಿನ ಹುಲಕೋಟಿಯಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ಸ್ವ-ಸಹಾಯ ಗುಂಪುಗಳ ಸದಸ್ಯರಿಗೆ ಹಮ್ಮಿಕೊಂಡ ಸಮಗ್ರ ಮೀನುಗಾರಿಕೆ ಸಾಕಾಣಿಕೆ ಮತ್ತು ನಿರ್ವಹಣೆ ಕುರಿತ ಎರಡು ದಿನಗಳ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈಗಾಗಲೇ ಸಂಜೀವಿನಿ ಯೋಜನೆಯ ಮೂಲಕ ಗ್ರಾಮೀಣ ಮಹಿಳೆಯರು ಆರ್ಥಿಕವಾಗಿ ಮುಂದೆ ಬಂದಿದ್ದಾರೆ. ಅದೇ ರೀತಿ ಮೀನುಗಾರಿಕೆಯನ್ನು ಸಹ ವೈಜ್ಞಾನಿಕವಾಗಿ ಮಾಡುವ ಮೂಲಕ ಯಶಸ್ಸು ಗಳಿಸುವತ್ತ ದಿಟ್ಟ ಹೆಜ್ಜೆ ಹಾಕಬೇಕೆಂದು ಪ್ರೋತ್ಸಾಹಿಸಿದರು.




ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ನಾಗರಾಜ ಮಾತನಾಡಿ, ಮೀನುಗಾರಿಕೆಯನ್ನು ವೈಜ್ಞಾನಿಕವಾಗಿ ಅಳವಡಿಸಿಕೊಂಡರೆ ಗ್ರಾಮೀಣ ಕುಟುಂಬಗಳು ಹೆಚ್ಚುವರಿ ಆದಾಯ ಗಳಿಕೆ ಮಾಡಬಹುದು. ಸ್ವ-ಸಹಾಯ ಗುಂಪುಗಳು ಈ ತರಬೇತಿಯಲ್ಲಿ ಸಿಗುವ ಜ್ಞಾನವನ್ನು ಬಳಸಿಕೊಂಡು ಸಮೂಹವಾಗಿ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

> ಇಂತಹ ತರಬೇತಿಗಳು ನಮ್ಮ ಜೀವನೋಪಾಯಕ್ಕೆ ದಾರಿದೀಪವಾಗುತ್ತವೆ. ನಾವು ಕಲಿತದ್ದನ್ನು ನಮ್ಮ ಗ್ರಾಮದ ಗುಂಪುಗಳೊಂದಿಗೆ ಹಂಚಿಕೊಳ್ಳುತ್ತೇವೆ ಎಂದು ಶಿಬಿರದಲ್ಲಿ ಪಾಲ್ಗೊಂಡ ಶಿಬಿರಾರ್ಥಿಗಳಾದ ರಾಜೇಶ್ವರಿ ಬಿನ್ನಾಳ ಮತ್ತು ಗೀತಾ ಶಿರಹಟ್ಟಿ ಸಂತಸ ವ್ಯಕ್ತಪಡಿಸಿದರು.

ಸಂಜೀವಿನಿ ಯೋಜನೆಯ ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಘುನಾಥ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ತರಬೇತಿಯಲ್ಲಿ ಕಲಿತ ತಂತ್ರಗಳನ್ನು ಕಾರ್ಯರೂಪಕ್ಕೆ ತಂದು, ಗುಂಪಿನ ಸದಸ್ಯರು ಸಮೂಹ ಆಧಾರಿತ ಉತ್ಪಾದನೆ ಮಾಡಿದರೆ, ಮಾರುಕಟ್ಟೆ ಸಂಪರ್ಕ ಸುಲಭವಾಗುತ್ತದೆ ಎಂದು ತಿಳಿಸಿದರು.

ತರಬೇತಿಯಲ್ಲಿ ಮೀನುಗಾರಿಕೆಯ ವೈಜ್ಞಾನಿಕ ವಿಧಾನಗಳು, ಕೆರೆ–ಕೊಳಗಳ ನಿರ್ವಹಣೆ, ಮೀನುಗಳಿಗೆ ಆಹಾರ ಮತ್ತು ಆರೈಕೆ ವಿಧಾನಗಳು, ರೋಗ ನಿರ್ವಹಣೆ ಹಾಗೂ ಮಾರುಕಟ್ಟೆ ಸಂಪರ್ಕ ಕುರಿತು ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ನಾರಾಯಣಪೂರ ಡ್ಯಾಮ್‌ನ ಉಪನಿರ್ದೇಶಕ ಸಿದ್ದಪ್ಪ ಸುರಗಿಹಳ್ಳಿ ಶಿಬಿರಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಗದಗ ಜಿ.ಪಂ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ ಮತ್ತು ಜಿಲ್ಲಾ ಉಪವಿಭಾಗೀಯ ಅಧಿಕಾರಿ ಗಂಗಪ್ಪ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಸಂಜೀವಿನಿ ಯೋಜನೆಯ ಸಿಬ್ಬಂದಿಗಳು ಮತ್ತು ಮಹಿಳಾ ಗುಂಪುಗಳ ಸದಸ್ಯರು ಉಪಸ್ಥಿತರಿದ್ದರು.

### ಪ್ರೊ. ಎಸ್.ವೈ. ಚಿಕ್ಕಟ್ಟಿ ಅಭಿನಂದನಾ ಗ್ರಂಥ ಪ್ರಕಟಣೆಗೆ ಸಿದ್ಧತೆ

# ಚಿಕ್ಕಟ್ಟಿಯವರ ಶೈಕ್ಷಣಿಕ ಸೇವೆ ಅಮೋಘವಾದದ್ದು..!




> ಶಿಕ್ಷಣ ಕ್ಷೇತ್ರವನ್ನು ಶ್ರೀಮಂತಗೊಳಿಸಲು ಪ್ರೊ. ಚಿಕ್ಕಟ್ಟಿ ಗುರುಗಳು ಪಟ್ಟಿರುವ ಶ್ರಮ ಮತ್ತು ದಿಟ್ಟ ಹೆಜ್ಜೆಗಳ ವಿಶೇಷತೆಯನ್ನು ಮನಗಂಡು, ಅವರ ಶಿಷ್ಯ ಬಳಗ ಮತ್ತು ಅಭಿಮಾನಿಗಳ ಅಪೇಕ್ಷೆಯಂತೆ ಈ ಅಭಿನಂದನಾ ಗ್ರಂಥವನ್ನು ಪ್ರಕಟಿಸಲಾಗುತ್ತಿದೆ ಎಂದು ಐ.ಕೆ. ಕಮ್ಮಾರ ತಿಳಿಸಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಕ್ಷೇತ್ರದಲ್ಲಿ ತಮ್ಮದೇ ಛಾಪು ಮೂಡಿಸಿರುವ ಪ್ರೊ. ಎಸ್.ವೈ. ಚಿಕ್ಕಟ್ಟಿ ಅವರ ಶೈಕ್ಷಣಿಕ ಕೊಡುಗೆಯನ್ನು ಸ್ಮರಿಸುವ ಉದ್ದೇಶದಿಂದ ಅಭಿನಂದನಾ ಗ್ರಂಥವನ್ನು ಪ್ರಕಟಿಸಲು ಸಿದ್ಧತೆ ನಡೆದಿದೆ ಎಂದು ಹಿರಿಯ ಸಾಹಿತಿ ಮತ್ತು ಅಭಿನಂದನಾ ಗ್ರಂಥದ ಪ್ರಧಾನ ಸಂಪಾದಕ ಐ.ಕೆ. ಕಮ್ಮಾರ ಹೇಳಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಂಡರಗಿ ರಸ್ತೆಯಲ್ಲಿ ಅಡವಿಸೋಮಾಪುರ ಗ್ರಾಮದ ಸಮೀಪವಿರುವ ಚಿಕ್ಕಟ್ಟಿ ಶಿಕ್ಷಣ ಸಂಸ್ಥೆಯ ಕ್ಯಾಂಪಸ್ ಹೊಸ ಲೋಕವನ್ನೆ ಸೃಷ್ಟಿಸಿದೆ. ಸಂಸ್ಥೆಯ ಕ್ಯಾಂಪಸ್ ಕೇವಲ ಶಿಕ್ಷಣವಷ್ಟೇ ಅಲ್ಲದೆ, ಮಕ್ಕಳಲ್ಲಿ ಸಂಸ್ಕಾರ ಕಲಿಸುವ ಬದುಕು ಕಟ್ಟಿಕೊಡುವ ಕೇಂದ್ರವಾಗಿ ಬದಲಾಗಿದೆ. ಇಂತಹ ಅಪರೂಪದ ಶಿಕ್ಷಣ ಸಂಸ್ಥೆಯನ್ನು ಪ್ರಾರಂಭಿಸಿರುವ ಪ್ರೊ. ಚಿಕ್ಕಟ್ಟಿ ಅವರ 40 ವರ್ಷಗಳ ಶೈಕ್ಷಣಿಕ ಸೇವೆಯನ್ನು ಗ್ರಂಥರೂಪದಲ್ಲಿ ಹೊರತರಲು ನಿರ್ಧರಿಸಲಾಗಿದೆ ಎಂದರು.

ಪ್ರೊ. ಚಿಕ್ಕಟ್ಟಿಯವರು ಮೂಲತಃ ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಅಡಹಲಟ್ಟಿ ಗ್ರಾಮದವರು. ಬಾಲ್ಯದಿಂದಲೇ ಶಿಸ್ತನ್ನು ಮೈಗೂಡಿಸಿಕೊಂಡಿದ್ದ ಅವರು, ಗದಗಿನಲ್ಲಿ ಶಿಸ್ತಿನ ಸಿಪಾಯಿ ಎಂದೇ ಗುರುತಿಸಿಕೊಂಡಿದ್ದಾರೆ. 1983ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂ.ಎಸ್‌ಸಿ ಪದವಿ ಪೂರ್ಣಗೊಳಿಸಿದ ನಂತರ, ಗದಗಿನ ಅಂಜುಮನ್ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 1988ರವರೆಗೆ ಉಪನ್ಯಾಸಕ ಮತ್ತು ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದಾರೆ.

ನಂತರ ಒಂದು ಚಿಕ್ಕ ಬಾಡಿಗೆ ಮನೆಯಲ್ಲಿ ಮನೆ ಪಾಠದಿಂದ ಆರಂಭಗೊಂಡ ಅವರ ಪಯಣ, ಇವತ್ತು ಪೂರ್ವ ಪ್ರಾಥಮಿಕ ಶಾಲೆಯಿಂದ ಪದವಿ ಕಾಲೇಜಿನವರೆಗೆ ಸಂಸ್ಥೆಗಳನ್ನು ಕಟ್ಟಿ ಬೆಳೆಸುವಲ್ಲಿ ಯಶಸ್ವಿಯಾಗಿದ್ದಾರೆ. ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳಿಗೆ ಸಂಸ್ಕಾರ ನೀಡುವ ಅವರ ಪ್ರಯತ್ನ ಮೆಚ್ಚುವಂಥದ್ದು ಎಮದರು.

ಸುದ್ದಿಗೋಷ್ಠಿಯಲ್ಲಿ ಗ್ರಂಥ ಸಮಿತಿಯ ಅಧ್ಯಕ್ಷ ಎಸ್.ಎಲ್. ಹುಯಿಲಗೋಳ, ವಿ.ಎಂ. ಮುಂದಿನಮನಿ, ಶೋಭಾ ಸ್ಥಾವರಮಠ, ಶೋಭಾ ಭಟ್, ಪುಷ್ಪಲತಾ ಬೇಲೇರಿ, ರಿಯಾನಾ ಮುಲ್ಲಾ, ಶರಣಪ್ಪ ಗುಗಲೋತ್ತರ, ಮರಿಯಪ್ಪ ಹರಿಜನ, ಶ್ರೀಶೈಲ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

# ‘ಸೀರತ್ ಅಭಿಯಾನ’ ಸೆ.3ರಿಂದ




■ ವಿಜಯಸಾಕ್ಷಿ ಸುದ್ದಿ, ಗದಗ

ಮುಹಮ್ಮದ ಪೈಗಂಬರರ ಜೀವನ ಸಂದೇಶಗಳನ್ನು ತಿಳಿಸುವ ಸೀರತ್ ಅಭಿಯಾನವನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದೆ ಎಂದು ಈದ್ ಮಿಲಾದ್ ಕಮಿಟಿಯ ಕೆ.ಐ. ಶೇಖ್ ತಿಳಿಸಿದರು.

ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯದ ಹರಿಕಾರ ಮುಹಮ್ಮದ ಪೈಗಂಬರ್ ಅವರ ಮಾನವೀಯ ಸಂದೇಶಗಳನ್ನು ಜನಮಾನಸಕ್ಕೆ ತಲುಪಿಸುವ ಉದ್ದೇಶದಿಂದ ಜಮಾಅತೆ ಇಸ್ಲಾಮಿ ಹಿಂದ್ ವತಿಯಿಂದ ಸೆಪ್ಟೆಂಬರ್ 3ರಿಂದ 14ರ ವರೆಗೆ ರಾಜ್ಯಾದ್ಯಂತ ಈ ಅಭಿಯಾನ ನಡೆಯಲಿದೆ ಎಂದು ತಿಳಿಸಿದರು.

ಅಭಿಯಾನದ ಅಂಗವಾಗಿ ಮಠಾಧೀಶರೊಂದಿಗೆ ಚರ್ಚೆ, ಉಪನ್ಯಾಸಕರೊಂದಿಗೆ ವಿಚಾರ ವಿನಿಮಯ, ವೈದ್ಯರು ಮತ್ತು ವಕೀಲರ ಭೇಟಿ, ಪೈಗಂಬರರ ಕುರಿತಾದ ಎರಡು ಪುಸ್ತಕಗಳ ಬಿಡುಗಡೆ, ಪ್ರಬಂಧ ಮತ್ತು ಭಾಷಣ ಸ್ಪರ್ಧೆ, ರಕ್ತದಾನ ಶಿಬಿರ ಹಾಗೂ ಇನ್ನೂ ಹಲವು ಸಾಮಾಜಿಕ ಚಟುವಟಿಕೆಗಳನ್ನು ಕೈಗೊಳ್ಳುವ ಮೂಲಕ ಅಭಿಯಾನವನ್ನು ವಿಶಿಷ್ಟವಾಗಿ ರೂಪಿಸಲಾಗಿದೆ ಎಂದು ತಿಳಿಸಿದರು.

ಸೆ. 5ರಂದು ಹಳೆ ಬಸ್ ನಿಲ್ದಾಣದ ಸಮೀಪದ ಉರ್ದು ಶಾಲೆಯಲ್ಲಿ ಪೈಗಂಬರರ ಜಯಂತಿ ಆಚರಿಸಲಾಗುವುದು. ಅಂದು ಮಕ್ಕಳಿಗೆ ಪುಸ್ತಕ ವಿತರಿಸಲಾಗುವುದು. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಸೇರಿದಂತೆ ಅನೇಕ ಗಣ್ಯರು ಭಾಗಿಯಾಗಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಪ್ಯಾರಾಲಿ ನೂರಾನಿ, ಉಸ್ಮಾನ ಅಲಿ, ಡಾ. ಮಹಮ್ಮದ ನಿಜಾಮುದ್ದೀನ್, ಮುಕ್ತಿಯಾರ ಮೌಲ್ವಿ, ಸಿರಾಜ್ ಅಹ್ಮದ್ ಖಾಜಿ, ಎಂ.ಎಂ. ಹುನಗುಂದ, ಮುನ್ನಾ ಕಲ್ಮನಿ, ಯುಸೂಫ್ ಮುಲ್ಲಾ ಮುಂತಾದವರಿದ್ದರು.

# ಕ್ರೀಡಾ ಸಾಧನೆಯಿಂದ ಉತ್ತಮ ಭವಿಷ್ಯ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಉತ್ತಮ ಭವಿಷ್ಯ ಹೊಂದಲು ಸಾಧ್ಯವಿದೆ ಎಂದು ಕುರ್ತಕೋಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಅಪ್ಪಣ್ಣ ಇನಾಮತಿ ಹೇಳಿದರು.

ಅವರು ಕುರ್ತಕೋಟಿ ಗ್ರಾಮದ ಹುಲಕೋಟಿ ಶಿಕ್ಷಣ ಸಮಿತಿಯ ಅಮರಪ್ಪ ಇನಾಮತಿ ಪ್ರೌಢಶಾಲೆಯಲ್ಲಿ ವಲಯ ಮಟ್ಟದ ಕ್ರಿಡಾಕೂಟ ಉದ್ಘಾಟಿಸಿ ಮಾತನಾಡಿ, ಪ್ರಾಥಮಿಕ ಹಾಗೂ ಪ್ರೌಢ ಹಂತದಲ್ಲಿ ಮಕ್ಕಳು ಕ್ರೀಡಾಕೂಟದಲ್ಲಿ ಭಾಗವಹಿಸಿ ಉತ್ತಮ ಸಾಧನೆ ಮಾಡಿದಲ್ಲಿ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಲು ಸಹಕಾರಿಯಾಗುತ್ತದೆ. ಮಕ್ಕಳು ಪಠ್ಯದ ಜೊತೆಯಲ್ಲಿ ಪಠ್ಯೇತರ ಚಟುವಟಿಕೆಗಳಲ್ಲಿ ನಿತ್ಯ ಭಾಗವಹಿಸಬೇಕು. ಇದರಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢರಾಗಲು ಸಾಧ್ಯವಾಗುತ್ತದೆ. ಗ್ರಾಮೀಣ ಮಕ್ಕಳು ರಾಜ್ಯ ಹಾಗೂ ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡುವುದರಿಂದ ಉತ್ತಮ ಉದ್ಯೋಗಗಳು ನಿಮ್ಮನ್ನು ಅರಸಿ ಬರುತ್ತವೆ ಎಂದರು.

ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ, ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಎಂ.ವಿ. ಪಾಟೀಲ, ಆರ್.ಎಸ್. ಕರಿಗೌಡರ, ಜಿ.ಎನ್. ಪಾಟೀಲ, ಅಶೋಕ ಶಿರಹಟ್ಟಿ, ಹನಮಂತಪ್ಪ ಹಾದಿಮನಿ, ರಜಿಯಾಬೇಗಂ ನಲವಡಿ, ಮಲಕಾಜಪ್ಪ ಹೊಸಮನಿ, ಈರಪ್ಪ ತಿಪ್ಪಣ್ಣವರ, ಶೇಖರಯ್ಯ ಹೊಸಮಠ, ವೆಂಕರೆಡ್ಡಿ ಹೊಸಮನಿ, ಮುಖ್ಯೋಪಾಧ್ಯಾಯ ಜಂಭುನಾಥ ಹರಿವಾಣ, ದೈಹಿಕ ಶಿಕ್ಷಕ ಎಂ.ಎಚ್. ಅಂಗಡಿ, ಅವಿನಾಶ ಬೆಟಗೇರಿ, ಬಕ್ಷಿ ತಹಸೀಲ್ದಾರ, ರಾಘವೇಂದ್ರ ಕೋಳಿವಾಡ, ಯಲ್ಲಪ್ಪ ಬೇವಿನಮರದ, ವಿರೂಪಾಕ್ಷಪ್ಪ ಕಿಚಡಿ ಇದ್ದರು.

### ಶಿಕ್ಷಣ ಇಲಾಖೆ, ಜನಪ್ರತಿನಿಧಿಗಳ ನಿರ್ಲಕ್ಷ್ಯಕ್ಕೆ ಪಾಲಕರ ಆಕ್ರೋಶ

# ಶಿಥಿಲ ಕಟ್ಟಡದಲ್ಲಿಯೇ ಮಕ್ಕಳ ಕಲಿಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರು ಗ್ರಾಮದ ಶ್ರೀ ಗುರು ದಿಂಗಾಲೇಶ್ವರ ಸರಕಾರಿ ಪ್ರಾಥಮಿಕ ಶಾಲೆಯ ಕಟ್ಟಡ ಬಹುತೇಕ ಹಾಳಾಗಿದ್ದು, ಇಂತಹ ಕಟ್ಟಡದಲ್ಲಿಯೇ ಒಟ್ಟು 380 ಮಕ್ಕಳು ಕಲಿಯುವ ಅನಿವಾರ್ಯತೆ ನಿರ್ಮಾಣವಾಗಿದೆ. ಈ ಸಮಸ್ಯೆ ಹತ್ತಾರು ವರ್ಷಗಳದ್ದಾದರೂ ಇಲಾಖೆ, ಜನಪ್ರತಿನಿಧಿಗಳು ಈ ಕುರಿತು ಕ್ರಮ ಕೈಗೊಳ್ಳದಿರುವದು ಪಾಲಕರ ಆಕ್ರೋಶಕ್ಕೆ ಕಾರಣವಾಗುತ್ತಿದೆ.

ತಾಲೂಕಿನ ಕೊನೆಯ ಗ್ರಾಮ ಬಾಲೆಹೊಸೂರ 10 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ದೊಡ್ಡ ಗ್ರಾಮವಾಗಿದೆ. 1ರಿಂದ 7ನೇ ತರಗತಿಯವರೆಗೂ ಒಟ್ಟು 380 ವಿದ್ಯಾರ್ಥಿಗಳನ್ನು ಹೊಂದಿರುವ ಶಾಲಾ ಕಟ್ಟಡದಲ್ಲಿ ಒಟ್ಟು 14 ಕೊಠಡಿಗಳಿವೆ. ಅದರಲ್ಲಿ 8 ಕೊಠಡಿಗಳು ಶಿಥಿಲಗೊಂಡಿದ್ದು, ಅಪಾಯಕ್ಕೆ ಆಹ್ವಾನ ನೀಡುವಂತಿವೆ. 8 ಕೊಠಡಿಗಳು ಡೆಮಾಲೆಷನ್ ಹಂತಕ್ಕೆ ಬಂದಿದ್ದು, ಅಲ್ಲಿ ಮಕ್ಕಳು ಓಡಾಡುವುದೂ ಅಪಾಯಕಾರಿ. ಉಳಿದ 4 ಕೊಠಡಿಗಳಲ್ಲಿಯೇ 380 ಮಕ್ಕಳು ಕಲಿಯುವ ಅನಿವಾರ್ಯತೆಯಿದೆ. ಒಂದೇ ಕೊಠಡಿಯಲ್ಲಿ 4ರಿಂದ 7ನೇ ವರ್ಗಗಳು, ಉಳಿದ ಕೊಠಡಿಯಲ್ಲಿ 1ರಿಂದ 3ನೇ ವರ್ಗದ ನಲಿ–ಕಲಿ ಮಕ್ಕಳು ಕಲಿಯುವಂತಾಗಿದೆ.



ಇದರಲ್ಲಿಯೇ ಮುಖ್ಯೋಪಾಧ್ಯಾಯರ ಕಛೇರಿ, ಶಿಕ್ಷಕರ ಕೊಠಡಿ, ಅಡುಗೆ ಕೋಣೆ ಎಲ್ಲವೂ ಸೇರಿವೆ. ಒಂದೊಂದು ಬೆಂಚ್ ಮೇಲೆ ನಾಲ್ಕು ಮಕ್ಕಳು ಕುಳಿತುಕೊಳ್ಳುವದು ಹಾಗೂ ಇನ್ನುಳಿದ ಮಕ್ಕಳು ನೆಲದ ಮೇಲೆ ಕುಳಿತು ಪಾಠ ಕೇಳುವ ದುಸ್ಥಿತಿ ಇಲ್ಲಿದೆ. ಈ ಕೊಠಡಿಗಳು ಸಹ ಮಳೆ ಬಂದಾಗ ಸೋರುತ್ತಿರುವದರಿಂದ ಇಕ್ಕಟ್ಟಾದ ಜಾಗೆಯಲ್ಲಿಯೇ ಕುಳಿತು ಕಲಿಯುವಂತಾಗಿದೆ.

> ಬಾಲೆಹೊಸೂರು ಗ್ರಾಮದ ಸರಕಾರಿ ಶಾಲೆಯ ಸಮಸ್ಯೆಗಳ ಕುರಿತಂತೆ ಶಿಕ್ಷಣ ಇಲಾಖೆಗೆ ಗ್ರಾಮದ ಶಿಕ್ಷಣ ಪ್ರೇಮಿಗಳು ಮನವಿ ಮಾಡಿದ್ದರೂ ಸಹ ಯಾವುದೇ ಪ್ರಯೋಜನವಾಗಿಲ್ಲ. ಅಲ್ಲದೆ ಅಪಾಯಕ್ಕೆ ಆಹ್ವಾನ ನೀಡುತ್ತಿರುವ ಶಿಥಿಲ ಕಟ್ಟಡವನ್ನು ತೆರವು ಮಾಡದಿರುವದು ಪಾಲಕರ ಆತಂಕಕ್ಕೆ ಕಾರಣವಾಗಿದೆ. ಇಲ್ಲಿ ಶಿಕ್ಷಕರ ಕೊರತೆಯೂ ಇದ್ದು, ಇಲಾಖೆ ಕೂಡಲೇ ಇದರ ಬಗ್ಗೆ ಕ್ರಮ ಕೈಗೊಂಡು ಮಕ್ಕಳ ಶಿಕ್ಷಣಕ್ಕೆ ಅನೂಕೂಲ ಮಾಡಿಕೊಡಬೇಕು.
>
> **– ಶರಣಪ್ಪ ಮರಳಹಳ್ಳಿ.**
> ಎಸ್‌ಡಿಎಂಸಿ ಅಧ್ಯಕ್ಷರು.

ಶಾಲೆಯಲ್ಲಿ ಶಿಥಿಲಗೊಂಡಿರುವ ಕಟ್ಟಡ ತೆರವುಗೊಳಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವದು. ಈಗಾಗಲೇ ಎರಡು ಕೊಠಡಿಗಳು ವಿವೇಕ ಯೋಜನೆಯಲ್ಲಿ ಮಂಜೂರಾಗಿದ್ದು, ಲೋಕೋಪಯೋಗಿ ಇಲಾಖೆಯ ಟೆಂಡರ್ ಪ್ರಕ್ರಿಯೆ ಹಂತದಲ್ಲಿದೆ. ಜಿ.ಪಂದಿಂದ 5 ಲಕ್ಷ ಕ್ರಿಯಾಯೋಜನೆ ಅನುಮೋದನೆಗಿದೆ. ತಾ.ಪಂನಲ್ಲಿ ಕ್ರಿಯಾಯೋಜನೆ ಅಳವಡಿಸಲು ಮನವಿ ಸಲ್ಲಿಸಲಾಗಿದೆ. ಅಲ್ಲದೆ ದುರಸ್ತಿಗಾಗಿ ರಾಜ್ಯ ಕಚೇರಿಗೆ 14 ಲಕ್ಷ ರೂಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಆದಷ್ಟು ಬೇಗ ಟೆಂಡರ್ ಕರೆದು ಕಟ್ಟಡ ನಿರ್ಮಾಣ ಕಾರ್ಯಾರಂಭ ಮಾಡುತ್ತೇವೆ. ಶಿಕ್ಷಕರ ಕೊರತೆ ಬಗ್ಗೆ ಕ್ರಮ ಕೈಗೊಳ್ಳುತ್ತೇವೆ ಎಂದು ಡಿಡಿಪಿಐ ಆರ್.ಎಸ್.ಬುರಡಿ ಭರವಸೆ ನೀಡಿದ್ದಾರೆ.

## ಸಂಪಾದಕೀಯ

# ನಾಯಕತ್ವ: ಮಂತ್ರವೋ, ಮಂಥನವೋ?

ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು, ಜನರನ್ನು ಮರುಳು ಮಾಡಲು ಸಾಧ್ಯವಾದವನೇ ಅತ್ಯುತ್ತಮ ನಾಯಕ ಎಂಬ ಹೇಳಿಕೆ ನೀಡಿದ್ದು, ನಾಯಕತ್ವದ ನಿಜವಾದ ವ್ಯಾಖ್ಯಾನದ ಬಗ್ಗೆ ವ್ಯಾಪಕ ಚರ್ಚೆಗೆ ಕಾರಣವಾಗಿದೆ.

ಗಡ್ಕರಿ ಅವರ ಮಾತು, ಆಧುನಿಕ ರಾಜಕೀಯದ ವಾಸ್ತವತೆಯನ್ನು ಪ್ರತಿಬಿಂಬಿಸುತ್ತದೆ. ಇಂದು, ಭಾಷಣ, ಜನಪ್ರಿಯತೆ ಮತ್ತು ಭಾವನಾತ್ಮಕತೆಯು ಪ್ರಗತಿಪರ ಚಿಂತನೆ ಮತ್ತು ನೈಜ ಕೆಲಸಗಳಿಗಿಂತ ಹೆಚ್ಚು ಮಹತ್ವ ಪಡೆಯುತ್ತಿವೆ. ಆದರೆ, ನಾಯಕತ್ವ ಕೇವಲ ಮಾತಿನಿಂದ ಸಾಧ್ಯವೇ?

ನಾಯಕನೊಬ್ಬ ತನ್ನ ಜನರನ್ನು ಪ್ರಭಾವಿಸುವುದು ಅಗತ್ಯವೇ ಆದರೂ, ಅದುವೇ ಅಂತಿಮ ಗುರಿಯಲ್ಲ. ಮಹಾನ್ ನಾಯಕರು ಕೇವಲ ಮಾತುಗಳಿಂದ ಜನರನ್ನು ಮರುಳು ಮಾಡಿಲ್ಲ. ಬದಲಾಗಿ, ಅವರು ನೈತಿಕತೆ, ದೂರದೃಷ್ಟಿ, ಮತ್ತು ಕಠಿಣ ಪರಿಶ್ರಮದಿಂದ ಜನರ ವಿಶ್ವಾಸ ಗಳಿಸಿದ್ದಾರೆ.

ಗಾಂಧೀಜಿಯವರ ಅಹಿಂಸೆ, ಪಟೇಲ್ ಅವರ ರಾಜಕೀಯ ದೃಢತೆ ಅಥವಾ ಡಾ. ಅಬ್ದುಲ್ ಕಲಾಂ ಅವರ ವೈಜ್ಞಾನಿಕ ದೂರದೃಷ್ಟಿ – ಇವೆಲ್ಲವೂ ಕೇವಲ ಭಾಷಣದ ಪರಿಣಾಮಗಳಾಗಿರಲಿಲ್ಲ. ಅವು, ಬದ್ಧತೆಯಿಂದ ಕೂಡಿದ ನೈಜ ನಾಯಕತ್ವಕ್ಕೆ ಉದಾಹರಣೆಗಳು.

ಆಧುನಿಕ ರಾಜಕೀಯದಲ್ಲಿ, ಸಾಮಾಜಿಕ ಜಾಲತಾಣಗಳು ಮತ್ತು ಪ್ರಚಾರ ತಂತ್ರಗಳು ಜನರನ್ನು ಮರುಳು ಮಾಡುವ ಸಾಧನಗಳಾಗಿವೆ. ಇದರ ಪರಿಣಾಮವಾಗಿ, ನೈಜ ಕೆಲಸಗಳು ಮತ್ತು ಆರ್ಥಿಕ ಸುಧಾರಣೆಗಳಂತಹ ವಿಷಯಗಳು ಹಿನ್ನೆಲೆಗೆ ಸರಿದಿವೆ.

ನಿಜವಾದ ನಾಯಕತ್ವವು ಜನರನ್ನು ಮೆಚ್ಚಿಸಲು ಕಷ್ಟವಾದರೂ, ಅವರ ಜೀವನದಲ್ಲಿ ಸಕಾರಾತ್ಮಕ ಬದಲಾವಣೆ ತರುವಲ್ಲಿ ಯಶಸ್ವಿಯಾಗುತ್ತದೆ. ಆದ್ದರಿಂದ, ನಾಯಕತ್ವದ ನಿಜವಾದ ಮಾಪನವು ಬರೇ ಜನಪ್ರಿಯತೆಯಲ್ಲ, ಬದಲಾಗಿ ಅವರು ಸಮಾಜಕ್ಕೆ ತರುವ ಶಾಶ್ವತ ಪರಿಹಾರ ಮತ್ತು ವಿಶ್ವಾಸಾರ್ಹತೆಯಲ್ಲಿದೆ.

### ಉತ್ತರ ಕರ್ನಾಟಕದ ಗ್ರಾಮೀಣ ಪ್ರದೇಶಗಳಲ್ಲಿ ಇಂದಿಗೂ ಇದೆ ವಿಶೇಷ ಆರಾಧನೆ

# ದುಗುಡ ಕಳೆವ ಜೋಕುಮಾರ ಸ್ವಾಮಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಉತ್ತರ ಕರ್ನಾಟಕ ಭಾಗದಲ್ಲಿ ಆಚರಿಸಲ್ಪಡುವ ಪ್ರತಿಯೊಂದು ಹಬ್ಬಗಳಿಗೂ ತಮ್ಮದೇ ಆದ ವೈಶಿಷ್ಟ್ಯಮಯ ಹಿನ್ನೆಲೆ ಇದೆ. ಕೆಲವು ಹಬ್ಬ-ಹರಿದಿನಗಳು ಮನರಂಜನೆಯ ಮೂಲಕ ಆಚರಿಸಲ್ಪಡುತ್ತಿದ್ದರೆ, ಹಲವು ಸಮಾಜದಲ್ಲಿ ಬೇರುಬಿಟ್ಟಿರುವ ದುಗುಡ, ದುಮ್ಮಾನಗಳನ್ನು ದೂರ ಮಾಡುವಂತಹ ದೇವರುಗಳಿಗೆ ಸಂಬಂಧಿಸಿವೆ. ಇಂತಹ ಸಾಲಿಗೆ ಸೇರುವ ಜೋಕುಮಾರ ಸ್ವಾಮಿಯ ಆರಾಧನೆ ಇದೀಗ ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಕಂಡು ಬರುತ್ತಿದೆ.

ಕೃಷಿಕ ಸಮೂಹದ ದೃಷ್ಟಿಯಲ್ಲಿ ಜೋಕುಮಾರ ಮಳೆ-ಬೆಳೆ ತರಿಸುವ, ಜನತೆಯ ಬಾಧೆಗಳನ್ನು ದೂರ ಮಾಡುವ ದೇವನಾಗಿ ಮೊದಲಿನಿಂದಲೂ ಆರಾಧನೆಗೊಳಗಾಗಿದ್ದಾನೆ. ಹೀಗಾಗಿ ಜೋಕುಮಾರ ಸ್ವಾಮಿಯ ಆರಾಧನೆಗೆ ಕೃಷಿಕ ಸಮೂಹ ಹೆಚ್ಚಿನ ಪ್ರಾಶಸ್ತ್ಯ ನೀಡುತ್ತಿದೆ. ಭಾದ್ರಪದ ಮಾಸದಲ್ಲಿ ಜೋಕುಮಾರ ಜನಿಸುತ್ತಾನೆ ಎನ್ನುವ ನಂಬಿಕೆ ಜನಪದದಲ್ಲಿದೆ. ಇದಕ್ಕೆ ಜ್ಯೋಕ್ಯಾನ ಹುಣ್ಣಿಮೆ ಎಂದು ಕರೆಯಲಾಗುತ್ತಿದ್ದು, ಪ್ರತಿ ಸಲ ಈ ಸಮಯದಲ್ಲಿ ಭಕ್ತಿ, ಶ್ರದ್ಧೆ, ಗೌರವ ಹಾಗೂ ನಿಷ್ಠೆ, ಸಡಗರದಿಂದ ಹುಣ್ಣಿಮೆ ಆಚರಿಸುವ ಪದ್ಧತಿ ಇಂದಿಗೂ ಈ ಭಾಗದಲ್ಲಿ ಚಾಲ್ತಿಯಲ್ಲಿದೆ.

ಅಂಬಿಗರು, ಕಬ್ಬಲಿಗರು, ಗಂಗೆಯ ಮಕ್ಕಳು, ಬಾರ್ಕಿ, ಬಾರಕೇರ ಸಮುದಾಯದವರು ಮನೆಯಲ್ಲಿ ತುಂಬಿದ ಅಷ್ಟಮಿ, ಎಳೆ ಅಷ್ಟಮಿ ತಿಥಿಯ ಮರುದಿನ ಮೂಲಾ ನಕ್ಷತ್ರದಂದು ಹುಟ್ಟುವ ಜೋಕುಮಾರ ಅನಂತನ ಹುಣ್ಣಿಮೆ ದಿನ ಕೆರೆಯ ಅಗಸರ (ಮಡಿವಾಳರ) ಕಲ್ಲಿನ ಅಡಿಯಲ್ಲಿ ಅಸುನೀಗುತ್ತಾನೆ ಎಂಬ ನಂಬಿಕೆಯಿದ್ದು, ಈ ಅನಂತನ ಹುಣ್ಣಿಮೆಯೇ ಜೋಕುಮಾರನ ಹುಣ್ಣಿಮೆ. ಜೋಕುಮಾರನನ್ನು ಬುಟ್ಟಿಯಲ್ಲಿ ಕೂಡಿಸಿಕೊಂಡು ಜೋಕ್ಯಾನ ವರ್ಣನೆಯ ಜನಪದ ಗೀತೆಗಳನ್ನು ಲಯಬದ್ಧವಾಗಿ ಹೇಳುತ್ತಾ ಹಳ್ಳಿಗಳ ಪ್ರತಿಯೊಂದು ಓಣಿಗಳಲ್ಲಿ ತಿರುಗಾಡುತ್ತಾರೆ.

ಜೋಕುಮಾರ ಮನೆ ಎದುರು ಪ್ರತ್ಯಕ್ಷವಾದಾಗ ಅಕ್ಕಿ ಇನ್ನಿತರ ಬಗೆಯ ಕಾಳು, ಕಡಿಯನ್ನು ಅರ್ಪಿಸಿ ಪ್ರಾರ್ಥನೆ ಸಲ್ಲಿಸಲಾಗುತ್ತದೆ. ಜೋಕುಮಾರನ ಬುಟ್ಟಿ ಹೊತ್ತು ತಂದ ಮಹಿಳೆಯರು ಬೇವಿನ ತಪ್ಪಲು ಹಾಗೂ ನುಚ್ಚನ್ನು ಪ್ರಸಾದದ ರೂಪದಲ್ಲಿ ನೀಡಿ ತೆರಳುತ್ತಾರೆ. ಜೋಕುಮಾರ ಸ್ವಾಮಿಯದು ಬಹು ವಿಶಿಷ್ಟವಾದ ವ್ಯಕ್ತಿತ್ವ. ಅಗಲವಾದ ಮುಖ ದಿಟ್ಟ ಕಣ್ಣುಗಳು, ಎತ್ತರದ ತಿಲಕ, ಚೂಪಾದ ಮೀಸೆ, ತೆರೆದ ಬಾಯಿ, ಹಣೆ ತುಂಬ ವಿಭೂತಿ-ಕುಂಕುಮ ಇಷ್ಟೆಲ್ಲ ಶೋಭಾಯಮಾನವಾಗಿ ಬೇವಿನ ತಪ್ಪಲಿರುವ ಬುಟ್ಟಿಯೊಳಗೆ 7 ದಿನಗಳ ಕಾಲ ಕುಳಿತುಕೊಂಡು ಊರು-ಕೇರಿ ತಿರುಗುತ್ತಾನೆ. ಮೂರ್ನಾಲ್ಕು ಮಹಿಳೆಯರು ಜೋಕುಮಾರನ ಬುಟ್ಟಿಯನ್ನು ಹೊತ್ತುಕೊಂಡು ಆತನ ಸ್ತುತಿಯನ್ನು ಹಾಡುತ್ತಾ ಅಲೆದಾಡುತ್ತಾರೆ.

ಉಪ್ಪು ಹುಣಸೆಹಣ್ಣು, ದವಸ, ಧಾನ್ಯಗಳನ್ನು ಜೋಕುಮಾರನಿಗೆ ಕಾಣಿಕೆಯಾಗಿ ನೀಡಿದರೆ ರೋಗ-ರುಜಿನ, ತಿಗಣೆ ಕಾಟ, ಕ್ರಿಮಿ-ಕೀಟಗಳ ಹಾವಳಿ ತಪ್ಪುತ್ತದೆ, ಮಳೆ-ಬೆಳೆ ಹುಲುಸಾಗಲಿದೆ ಎಂಬ ಬಲವಾದ ನಂಬಿಕೆ ಇದೆ. ವಿಶೇಷವಾಗಿ ಮಕ್ಕಳಿಲ್ಲದವರು ಜೋಕುಮಾರನಲ್ಲಿ ಹರಕೆ ಹೊತ್ತರೆ ಸಂತಾನ ಭಾಗ್ಯ ಪ್ರಾಪ್ತಿಯಾಗುತ್ತದೆ ಎಂಬ ವಿಶ್ವಾಸ ಗಾಢವಾಗಿದೆ. ಜೋಕುಮಾರನ ಹುಣ್ಣಿಯನ್ನು ಆಚರಿಸುವ 7 ದಿನಗಳು ನವದಂಪತಿಗಳ ಪಾಲಿಗೆ ತುಂಬಾ ಅನಾಹುತಕಾರಿಯಾದ ದಿನಗಳು ಎಂಬ ಆತಂಕ ಇಂದಿಗೂ ಬೇರುಬಿಟ್ಟಿದೆ. ಈ ಸಮಯಕ್ಕೆ ಜೋಕ್ಯಾನ ಬೇಲಿ ಎಂದು ಕರೆಯಲಾಗುತ್ತದೆ. ಹೊಸದಾಗಿ ಮದುವೆಯಾದವರು ಒಟ್ಟಾಗಿ ಇರುವುದು ನಿಷೇಧ. ಇದಕ್ಕೆ ಹಲವಾರು ವಿವರಣೆಗಳನ್ನೂ ನೀಡಲಾಗುತ್ತದೆ.

ಜೋಕುಮಾರನಿಗೆ ಬೆಣ್ಣೆ ಎಂದರೆ ತುಂಬಾ ಪ್ರೀತಿ. ಮಕ್ಕಳಾಗದವರು ಸಂತಾನ ಭಾಗ್ಯಕ್ಕಾಗಿ ಜೋಕುಮಾರನಿಗೆ ಬೆಣ್ಣೆ ಹಚ್ಚಿ ಪೂಜಿಸುತ್ತಾರೆ. ಜೋಕುಮಾರನ ಸುತ್ತಿರುವ ಬೇವಿನ ಎಲೆಯನ್ನು ದನದ ಕೊಟ್ಟಿಗೆಯಲ್ಲಿ ಸುಟ್ಟು ಹೊಗೆ ಹರಡಿಸಿದರೆ ದನಕರುಗಳಿಗೆ ಯಾವುದೇ ರೀತಿಯ ಕಾಯಿಲೆಗಳು ಬರುವುದಿಲ್ಲ ಎನ್ನುವ ಅಭಿಪ್ರಾಯವೂ ಇದೆ. ಆಧುನಿಕತೆಯ ಗಾಳಿಯಿಂದಾಗಿ ಹಬ್ಬಗಳ ಆಚರಣೆಗಳಲ್ಲಿ ಶ್ರದ್ಧೆ ಮಾಯವಾಗುತ್ತಿರುವ ಇಂದಿನ ದಿನಗಳಲ್ಲಿ ಜೋಕುಮಾರ ಸ್ವಾಮಿ ಹಬ್ಬದ ವಿಶಿಷ್ಟ ಆಚರಣೆ ಗ್ರಾಮೀಣ ಭಾಗದಲ್ಲಿ ಇಂದಿಗೂ ಪ್ರಸ್ತುತವಾಗಿದೆ.

ಜೋಕುಮಾರನನ್ನು ಪೂಜಿಸಿದರೆ ಮಳೆ ಬರುವುದೆಂಬ ನಂಬಿಕೆ ರೈತರಲ್ಲಿ ಹಾಸುಹೊಕ್ಕಾಗಿದೆ. ಈಗ ಏಳು ದಿನ ಊರೂರು ಅಲೆಯುತ್ತೇವೆ. ರೈತರಿಗೆ ಸಮೃದ್ಧಿ ಮಳೆ, ಬೆಳೆ ಕರುಣಿಸಲು ಬೇಡುತ್ತೇವೆ ಎನ್ನುತ್ತಾರೆ ಅಬ್ಬಿಗೇರಿ ಗ್ರಾಮದ ನಿವಾಸಿ ಬಸವ್ವ ಬಾರಕೇರ, ಹನಮವ್ವ ಬಾರಕೇರ.

> ಶಿವ-ಪಾರ್ವತಿ ಭೂಲೋಕದ ಜನರ ಕಷ್ಟಗಳನ್ನು ತಿಳಿಯಲು ಗಣೇಶನನ್ನು ಕಳುಹಿಸುತ್ತಾರೆ. ಶುಕ್ಲಪಕ್ಷದ ಚೌತಿದಿನ ಧರೆಗಿಳಿದ ಗಣೇಶ, ನನಗೆ ಅದು ಬೇಕು ಇದು ಬೇಕೆಂದು ಪಟ್ಟು ಹಿಡಿದು, ಪುನಃ ಶಿವಲೋಕ್ಕೆ ಹೋಗಿ ಭೂಲೋಕದಲ್ಲಿ ಸರ್ವರೂ ಸುಖಿಯಾಗಿರುವವರು ಎಂದು ಹೇಳುತ್ತಾನೆ. ಗಣಪನ ಮಾತಿನಲ್ಲಿ ವಿಶ್ವಾಸ ಬಾರದ ಶಿವನು ಭೂಲೋಕದ ಜನರ ಕಷ್ಟ ತಿಳಿಯಲು ಜೋಕುಮಾರನನ್ನು ಕಳುಹಿಸುತ್ತಾನೆ. ಶಿವನ ಆಜ್ಞೆಯಂತೆ ಭೂಲೋಕಕ್ಕೆ ಬಂದ ಜೋಕುಮಾರ ಊರೂರುಗಳಿಗೆ ಅಲೆಯುತ್ತಾ ಜನರ ಕಷ್ಟಗಳನ್ನು ಆಲಿಸುತ್ತಾನೆ. ಪುನಃ ಶಿವನ ಬಳಿ ಹೋಗಿ ಧರೆಯಲ್ಲಿ ಎಲ್ಲರೂ ಕಷ್ಟದಿಂದ ಇದ್ದಾರೆ ಎಂದಾಗ ಶಿವ ಭೂಮಿಗೆ ಮಳೆ ಸುರಿಸುತ್ತಾನೆ ಎಂಬ ಪೌರಾಣಿಕ ಕತೆಯು ಈ ಆಚರಣೆಯ ಹಿಂದಿದೆ.
>
> **– ಲಕ್ಷ್ಮವ್ವ ಬಾರಕೇರ.**
> ಅಬ್ಬಿಗೇರಿ, ರೋಣ.

## ಗಣೇಶೋತ್ಸವ ನಿಮಿತ್ತ ಸಾಂಸ್ಕೃತಿಕ ವೈಭವ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ವಿನಾಯಕ ನಗರದಲ್ಲಿ ವಿನಾಯಕ ನಗರ ಅಭಿವೃದ್ಧಿ ಸಮಿತಿಯಿಂದ ಶುಕ್ರವಾರ ಸಂಜೆ ಲಲಿತಾ ಸಹಸ್ರನಾಮ ಪಠಣ, ಭರತನಾಟ್ಯ, ಸಂಗೀತ ಕಾರ್ಯಕ್ರಮಗಳ ಮೂಲಕ 3ನೇ ವರ್ಷದ ಗಣೇಶೋತ್ಸವವನ್ನು ಆಚರಿಸಲಾಯಿತು.

ಪಟ್ಟಣದ ಗಿರಿಜಾ ಶಂಕರ ರುದ್ರ ಬಳಗದ ಮಹಿಳೆಯರಿಂದ ಲಲಿತಾ ಸಹಸ್ರನಾಮ ಪಾರಾಯಣವು ಎಲ್ಲರನ್ನು ಭಕ್ತಿ ಪರವಶಗೊಳಿಸಿತು. ನಂತರ ಕಲಾ ವೈಭವ ಭರತನಾಟ್ಯ ತಂಡದ ಮಕ್ಕಳಿಂದ ಭರತನಾಟ್ಯ ಎಲ್ಲರ ಮನಸೆಳೆಯಿತು. ಶಾರದಾ ಸ್ವರಾಂಜಲಿ ಸಂಗೀತ ಪಾಠಶಾಲೆ ಮಕ್ಕಳಿಂದ ಸುಮಧುರ ಭಕ್ತಿ ಗೀತೆಗಳ ವೈಭವ, ಮಕ್ಕಳು ಹಾಗೂ ಸ್ಥಳೀಯ ಕಲಾವಿದರಿಂದ ಹಾಡು-ನೃತ್ಯ-ಸಂಗೀತ ಕಾರ್ಯಕ್ರಮ ಎಲ್ಲರನ್ನು ರಂಜಿಸಿದವು. ಮಹಿಳೆಯರಿಗಾಗಿ ರಂಗೋಲಿ ಸ್ಪರ್ಧೆ ಏರ್ಪಡಿಸಲಾಗಿತ್ತು. ವಿಜೇತರಿಗೆ ಬಹುಮಾನ ವಿತರಿಸಲಾಯಿತು.

ಈ ವೇಳೆ ವಿನಾಯಕ ನಗರ ಅಭಿವೃದ್ಧಿ ಸಮಿತಿ ಅಧ್ಯಕ್ಷ ಮಂಜುನಾಥ ಹೊಗೆಸೊಪ್ಪಿನ, ಕಾರ್ಯದರ್ಶಿ ರಾಘವೇಂದ್ರ ಕಡೆಮನಿ, ವಿಠ್ಠಲ ಬದಿ, ಡಾ. ಎಸ್.ಸಿ. ನೇಕಾರ, ವೀರೇಶ ಸಾಸಲವಾಡ, ರಾಜು ಕನವಳ್ಳಿ, ಸತ್ಯೇಂದ್ರ ಸಭಾವಡೆಯರಮಠ, ಮಂಜಯ್ಯ ಯಲಿಮಠ, ಚನ್ನವೀರಯ್ಯ ಹಿರೇಮಠ, ಪ್ರಕಾಶ ವಾಲಿ, ಪ್ರಶಾಂತ ಸರ್ವದೆ, ರವಿ ಬೋಮಲೆ, ಭರತ್ ಜೈನ್, ಬಸವರಾಜ ಪಡಸಾಲಿ, ಆರ್.ಪಿ. ಪುರಾಣಿಕಮಠ, ಅನಿಲ ಕುಲಕರ್ಣಿ, ಮಂಜುನಾಥ ಉಮಚಗಿ, ಈರಣ್ಣ ಬೆಳವಿಗಿ, ಕುಮಾರ ಭಂಗಿ, ಸತೀಶ ಪಾಟೀಲ, ಜಗದೀಶ್ ಆಚಾರ, ಮಂಜುನಾಥ ಬಂಡಿವಾಡ, ವಿಜಯ ತುಪ್ಪದ ಇದ್ದರು. ನಿರಂಜನ ವಾಲಿ, ಬಸವರಾಜ ಶೆಟ್ಟರ ಕಾರ್ಯಕ್ರಮ ನಿರ್ವಹಿಸಿದರು.

## ಧರ್ಮಸ್ಥಳ ಪ್ರಕರಣ ಕುರಿತು ಪಂಚಪೀಠಗಳ ಅಸಮಾಧಾನ

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಶ್ರೀ ಕ್ಷೇತ್ರ ಧರ್ಮಸ್ಥಳದ ಕುರಿತು ಕಳೆದ ಕೆಲ ದಿನಗಳಿಂದ ನಡೆಯುತ್ತಿರುವ ಬೆಳವಣಿಗೆಗಳ ಕುರಿತು ಪಂಚಪೀಠಗಳ ಜಗದ್ಗುರುಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು, ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು, ಶ್ರೀ ಕೇದಾರ ಭೀಮಾಶಂಕರ ಜಗದ್ಗುರುಗಳು, ಶ್ರೀಶೈಲ ಡಾ. ಚನ್ನಸಿದ್ಧರಾಮ ಜಗದ್ಗುರುಗಳು, ಶ್ರೀ ಕಾಶೀ ಡಾ.ಚಂದ್ರಶೇಖರ ಜಗದ್ಗುರುಗಳು, ನೂತನ ಜಗದ್ಗುರು ಡಾ.ಮಲ್ಲಿಕಾರ್ಜುನ ವಿಶ್ವಾರಾಧ್ಯ ಜಗದ್ಗುರುಗಳು ಶನಿವಾರ ಈ ಬಗ್ಗೆ ಜಂಟಿ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿ, ಧರ್ಮ ಕ್ಷೇತ್ರಗಳು ತಮ್ಮದೇ ಆದ ಸಂಸ್ಕೃತಿ ಮತ್ತು ಪರಂಪರೆಯನ್ನು ಅನುಸರಿಸುತ್ತವೆ.

ಅಂತಹ ಧರ್ಮ ಕ್ಷೇತ್ರಗಳಲ್ಲಿ ರಾಜಕೀಯವನ್ನು ಬೆರೆಸುವ ಕೆಲಸ ಯಾರೂ ಮಾಡಬಾರದು. ಅನಾವಶ್ಯಕವಾಗಿ ಧರ್ಮಸ್ಥಳದ ಬಗ್ಗೆ ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದು, ಭಕ್ತರ ಮತ್ತು ಸಮಾಜದ ಹಾಗೂ ಸರ್ಕಾರದ ದಿಕ್ಕು ತಪ್ಪಿಸುವ ಕೆಲಸ ನಡೆಯುತ್ತಿದೆ. ಸನಾತನ ಧರ್ಮ ತೇಜೋವಧೆಗೆ ಕಾಣದ ಕೈಗಳು ಹುನ್ನಾರ ನಡೆಸಿವೆ. ಸರ್ಕಾರ ರಚನೆ ಮಾಡಿರುವ ವಿಶೇಷ ತನಿಖಾ ಸಂಸ್ಥೆಯು ಮೇಲ್ನೋಟಕ್ಕೆ ಆರೋಪಿಗಳಾಗಿರುವವರ ವಿಚಾರಣೆ ನಡೆಸುತ್ತಿದ್ದು, ಈ ಒಟ್ಟಾರೆ ಪ್ರಕರಣದ ಹಿಂದಿನ ಸೂತ್ರಧಾರಿಗಳನ್ನು ಪತ್ತೆಹಚ್ಚಿ ಆದಷ್ಟು ಬೇಗ ಅವರಿಗೆ ಶಿಕ್ಷೆ ನೀಡುವಂತಾಗಬೇಕು ಎಂದು ಆಗ್ರಹಿಸಿದ್ದಾರೆ.

ಧರ್ಮಸ್ಥಳ ಕ್ಷೇತ್ರ ಶತಮಾನಗಳ ಇತಿಹಾಸ ಹೊಂದಿದ್ದು, ನಾಡಿಗೆ ವಿಶೇಷ ಕೊಡುಗೆ ನೀಡಿದೆ. ಧರ್ಮಾಧಿಕಾರಿಗಳಾದ ಡಾ. ವೀರೇಂದ್ರ ಹೆಗ್ಗಡೆಯವರು ಕಳೆದ 50 ವರ್ಷಗಳಿಂದ ಧರ್ಮ, ಸಂಸ್ಕೃತಿ ಪುನರುತ್ಥಾನಕ್ಕೆ ವಿಶೇಷ ಕೊಡುಗೆ ನೀಡಿದ್ದಾರೆ.

ಇಂತಹ ಕ್ಷೇತ್ರದ ಮೇಲೆ ಬಂದಿರುವ ಆರೋಪಗಳು ಮುಕ್ತವಾಗಿ ಆದಷ್ಟು ಬೇಗ ಮೊದಲಿನಂತೆ ಎಲ್ಲ ಸಾಮಾಜಿಕ ಕಾರ್ಯಗಳು ಮುಂದುವರೆಯುವಂತಾಗಲಿ ಎಂದು ಹಾರೈಸಿದ್ದಾರೆ.



## ಸಮಾಜಕ್ಕೆ ಪ್ರೇರಣೆಯಾಗಿ ಬದುಕಬೇಕು



**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮನುಷ್ಯರಾಗಿ ಜೀವಿಸುವುದಕ್ಕೆ ಪ್ರಾಮುಖ್ಯತೆ ಇದೆ. ಸಮಾಜದಲ್ಲಿ ನಾವೂ ಬದುಕಿ ಉಳಿದವರೂ ಬದುಕಲು ಪ್ರೇರಣೆಯಾಗಬೇಕು. ಈ ನಿಟ್ಟಿನಲ್ಲಿ ಗಣೇಶೋತ್ಸವದಲ್ಲಿ ರಕ್ತದಾನ ಶಿಬಿರ, ಆರೋಗ್ಯ ತಪಾಸಣೆ ಹಮ್ಮಿಕೊಂಡಿರುವ ಮುಂಡರಗಿ ತಾಲೂಕು ಪಂಚಾಯಿತಿಯ ನಡೆ ಅನುಕರಣೀಯ ಎಂದು ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.


ಅವರು ಮುಂಡರಗಿ ತಾಲೂಕು ಪಂಚಾಯಿತಿ ಆವರಣದಲ್ಲಿ ಗಣೇಶೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಹಾಗೂ ರಕ್ತದಾನ ಶಿಬಿರದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಕ್ತದಾನ ಜೀವ ಉಳಿಸುವ ಕಾರ್ಯವಾಗಿದ್ದು, ತುರ್ತು ಸಂದರ್ಭಗಳಲ್ಲಿ ಮತ್ತು ಶಸ್ತ್ರಚಿಕಿತ್ಸೆಗಳ ಸಮಯದಲ್ಲಿ ರಕ್ತದ ಅಗತ್ಯವಿರುವವರಿಗೆ ನೆರವಾಗುತ್ತದೆ. ಒಂದು ಬಾರಿ ರಕ್ತದಾನ ಮಾಡುವ ಮೂಲಕ ನೀವು ಹಲವಾರು ಜನರ ಜೀವ ಉಳಿಸಬಹುದು ಮತ್ತು ಇದರಿಂದ ದಾನಿಗಳಿಗೂ ಹಲವು ಆರೋಗ್ಯ ಲಾಭಗಳಿವೆ.

ಅದೇ ರೀತಿ ಅಂಗಾಂಗ ದಾನಗಳನ್ನು ಮಾಡಲು ಸಹ ನಾವು ಮುಂದಾಗಬೇಕು. ಇದರಿಂದ ನಾವಿಲ್ಲವಾದಾಗಲೂ ಜೀವಿಸಬಹುದು ಎಂದರು.

ಇದೇ ಸಂದರ್ಭದಲ್ಲಿ ರಕ್ತದಾನಿಗಳಿಗೆ ಪ್ರಮಾಣಪತ್ರ ವಿತರಿಸಲಾಯಿತು. ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ ಬಿ.ಎಲ್. ಕೊಪ್ಪಳ, ಸಹಾಯಕ ಕಾರ್ಯದರ್ಶಿ ಎಸ್. ಎಸ್. ಕಲ್ಮನಿ, ಮುಂಡರಗಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ವಿಶ್ವನಾಥ ಹೊಸಮನಿ, ತಾಲೂಕಾ ಯೋಜನಾಧಿಕಾರಿ ಪ್ರವೀಣ ಗೋಣೆಮ್ಮನವರ, ಗ್ಯಾರಂಟಿ ಸಮಿತಿ ಸದಸ್ಯ ವಿಶ್ವನಾಥ ಪಾಟೀಲ, ತಾಲೂಕಾ ಆರೋಗ್ಯ ಸುರಕ್ಷತಾ ಸಮಿತಿ ಸದಸ್ಯ ಯಲ್ಲಪ್ಪಗೌಡ ಕರಮುಡಿ ಮುಂತಾದವರಿದ್ದರು.

## ಗಣೇಶೋತ್ಸವದ ನಿಮಿತ್ತ ಸಮಾಜಮುಖಿ ಕಾರ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಸೂರಣಗಿ ಗ್ರಾಮದ ನವಚೇತನ ಯುವಕ ಮಂಡಳದವರು ಕಳೆದ 20 ವರ್ಷಗಳಿಂದ ಸಾರ್ವಜನಿಕ ಗಣೇಶೋತ್ಸವವನ್ನು ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಆಚರಿಸುತ್ತಿದ್ದು, ಪ್ರಸ್ತುತ 21ನೇ ವರ್ಷದ ಗಣೇಶೋತ್ಸವದ ನಿಮಿತ್ತ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

ಗಜಾನನೋತ್ಸವದ ಅಂಗವಾಗಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಸೆ.2ರ ಮುಂಜಾನೆ 10 ಗಂಟೆಯಿಂದ ಗದಗ ಜಿಲ್ಲಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಸೂರಣಗಿ ಗ್ರಾಮದ ಎಲ್ಲ ಸಂಘ-ಸಂಸ್ಥೆಗಳ ಸಹಯೋಗದಲ್ಲಿ 9ನೇ ವರ್ಷದ ಸ್ವಯಂಪ್ರೇರಿತ ರಕ್ತದಾನ ಶಿಬಿರವನ್ನು ಏರ್ಪಡಿಸಿದ್ದು, ರಕ್ತದಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ರಕ್ತದಾನ ಮಾಡಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಂಘಟಕರು ವಿನಂತಿಸಿದ್ದಾರೆ.

ಸೂರಣಗಿ ಗ್ರಾಮದಲ್ಲಿ ಎರಡು ದಶಕಗಳ ಹಿಂದೆ 9 ಮಂದಿ ಉತ್ಸಾಹಿ ಯುವಕರು ಸೇರಿ ಪ್ರಾರಂಭಿಸಿದ ಶ್ರೀ ನವಚೇತನ ಯುವಕ ಸಂಘ ಇಂದು ಸುಮಾರು 130 ಯುವಕರ ಶಕ್ತಿ ಕೇಂದ್ರವಾಗಿ ಜಿಲ್ಲೆಯಲ್ಲಿಯೇ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಎಲ್ಲರ ಗಮನ ಸೆಳೆಯುತ್ತಿದೆ.

### ಜಿಲ್ಲಾ ಕಣ್ಗಾವಲು ಸಮಿತಿ ಸಭೆಯಲ್ಲಿ ಡಿಸಿ ಸೂಚನೆ

# ಸ್ವಚ್ಛತೆಯ ಕುರಿತು ಅರಿವು ಮೂಡಿಸಿ



> ಇಲ್ಲಿಯವರೆಗೂ ಗದಗ ಜಿಲ್ಲೆಯಿಂದ 2025ರಲ್ಲಿ ಒಟ್ಟು 351 ಉಪ್ಪಿನ ಮಾದರಿಗಳು ಹಾಗೂ 176 ಮೂತ್ರದ ಮಾದರಿಗಳನ್ನು ಅಯೋಡಿನ್ ಪರೀಕ್ಷೆಗೆ ಕಳುಹಿಸಲಾಗಿತ್ತು. ಎಲ್ಲ ಮೂತ್ರದ ಮಾದರಿಗಳು ಸಹಜ ಎಂದು ವರದಿಯಾಗಿವೆ.
>
> ಅದರಲ್ಲಿ 3 ಉಪ್ಪಿನ ಮಾದರಿಗಳು < 15ಪಿಪಿಎಂ ಎಂದು ವರದಿಯಾಗಿವೆ ಎಂದು ಜಿಲ್ಲಾ ಸಮೀಕ್ಷಣಾಧಿಕಾರಿ ವೆಂಕಟೇಶ ರಾಠೋಡ ಸಭೆಗೆ ವಿವರಿಸಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ನಡೆದ ಜಿಲ್ಲಾ ಕಣ್ಗಾವಲು ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಡೆಂಗ್ಯೂ, ಚುಕ್ಕುನ್ ಗುನ್ಯಾ ರೋಗಗಳ ಹರಡುವಿಕೆ ತಡೆಗಟ್ಟಲು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯ ಕುರಿತು ಅರಿವು ಮೂಡಿಸಬೇಕು. ಗದಗ ಜಿಲ್ಲೆಯು ಕೂಡ ಕೆಎಫ್‌ಡಿ ಬಾಧಿತ ಎಂಡಮಿಕ್ ಜಿಲ್ಲೆಗಳಲ್ಲಿ ಒಂದಾಗಿದ್ದು, ಕೆಎಫ್‌ಡಿ ವೈರಸ್‌ನಿಂದ ಸೋಂಕಿತ ಉಣ್ಣೆಯು ಕಚ್ಚುವುದರಿಂದ ಹರಡುವ ವೈರಲ್ ಜ್ವರವಾಗಿದೆ. ಈ ಕಾಯಿಲೆಗೆ ಯಾವುದೇ ನಿರ್ದಿಷ್ಟ ಚಿಕಿತ್ಸೆ ಇಲ್ಲ. ರೋಗ ಬಾರದಂತೆ ಎಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯವಾಗಿರುತ್ತದೆ.

ಜಿಲ್ಲೆಯಿಂದ ಈಗಾಗಲೇ 76 ರಕ್ತದ ಮಾದರಿಗಳನ್ನು ಹಾಗೂ 26 ಟಿಕ್‌ಪೂಲ್ ಮಾದರಿಗಳನ್ನು ಕೆಎಫ್‌ಡಿ ವೈರಸ್ ಪತ್ತೆಗಾಗಿ ವಿಡಿಎಲ್ ಶಿವಮೊಗ್ಗ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಎಲ್ಲ ರಕ್ತದ ಮಾದರಿಗಳು ಹಾಗೂ ಟಿಕ್‌ಪೂಲ್ ಮಾದರಿಗಳ ಫಲಿತಾಂಶ ನೆಗೆಟಿವ್ ಎಂದು ವರದಿಯಾಗಿವೆ. ನವೆಂಬರ್ ತಿಂಗಳಿನಿಂದ ಜೂನ್ ತಿಂಗಳವರೆಗೂ ರೋಗ ಪ್ರಸರಣವಾಗುವ ಸಮಯವಿರುವುದರಿಂದ ತಾಲೂಕಾ ಮಟ್ಟದಲ್ಲಿ ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಪ್ರತಿ ತಿಂಗಳು ಕೆಎಫ್‌ಡಿ ಕುರಿತು ಸಭೆ ನಡೆಸಬೇಕು ಎಂದರು.

ಜಿಲ್ಲಾ ಸಮೀಕ್ಷಣಾಧಿಕಾರಿ ವೆಂಕಟೇಶ ರಾಠೋಡ ಮಾತನಾಡಿ, ಜಿಲ್ಲೆಯಲ್ಲಿ ಜನವರಿ 2025ರಿಂದ ಜುಲೈ 2025ರವೆಗೆ ಒಟ್ಟು 2499 ಕರುಳು ಬೇನೆ ಪ್ರಕರಣಗಳು, 2064 ಟೈಫೈಡ್ ಪ್ರಕರಣಗಳು, 22 ಹೆಪಟೈಟೀಸ್-ಎ, 61 ಡೆಂಗೀ ಪ್ರಕರಣಗಳು ವರದಿಯಾಗಿವೆ. ಜನವರಿ 2025ರಿಂದ ಜುಲೈ 2025ರವರೆಗೆ ಒಟ್ಟು 206679 ಸಂಶಯಾಸ್ಪದ ಮಲೇರಿಯಾ ರಕ್ತದ ಲೇಪನಗಳನ್ನು ಸಂಗ್ರಹಿಸಿದ್ದು, ಅದರಲ್ಲಿ 3 ಖಚಿತ ಪ್ರಕರಣಗಳು ವರದಿಯಾಗಿವೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ 5988 ನಾಯಿ ಕಡಿತ ಹಾಗೂ 926 ಇತರೇ ಪ್ರಾಣಿಗಳ ಕಡಿತ ವರದಿಯಾಗಿವೆ ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಕರಿಗೌಡ್ರ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ವೈ. ಕೆ. ಭಜಂತ್ರಿ, ಡಾ. ರಾಜೇಂದ್ರ ಬಸರಿಗಿಡದ, ಡಾ. ಅರುಂಧತಿ ಕುಲಕರ್ಣಿ ಸೇರಿದಂತೆ ತಾಲೂಕಾ ಆರೋಗ್ಯಾಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅಲ್ಪಸಂಖ್ಯಾತರ ಸಮುದಾಯದ ಯುವಕ/ಯುವತಿಯರಿಗೆ ನವೋದ್ಯಮಗಳನ್ನು ( Startup) ಪ್ರಾರಂಭಿಸಲು ಉತ್ತೇಜನ ನೀಡುವ ಸಲುವಾಗಿ ಸಹಾಯಧನ ಯೋಜನೆಯನ್ನು ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಇಲಾಖೆಯ ಸಹಯೋಗದೊಂದಿಗೆ ನೀಡಲಾಗಿರುವ Elevate ( Minorities ) 2025 ರಲ್ಲಿನ ಮಾರ್ಗಸೂಚಿಗಳೊಂದಿಗೆ ಜಾರಿಗೊಳಿಸಲಾಗಿರುತ್ತದೆ. ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ, ವೆಬ್ಸೈಟ್: ei-tbt.karnataka.gov.in ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿ. 15-09-2025 ರವರಗೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:080-22231007ಕ್ಕೆ ಸಂಪರ್ಕಿಸಬಹುದು ಅಥವಾ elevate-ktech@ka.gov.in ಗೆ ಇ-ಮೇಲ್ ಕಳುಹಿಸಬಹುದು ಎಂದು ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಪ್ರಕಟಣೆ ತಿಳಿಸಿದೆ.

## ಮನೋರಮಾ ಕಾಲೇಜಿನಲ್ಲಿ ಪಾಲಕರ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಪದವಿಪೂರ್ವ ಕಾಲೇಜಿನಲ್ಲಿ ಪಾಲಕರ ಸಭೆಯನ್ನು ಆಯೋಜಿಸಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ಪ್ರಾಚಾರ್ಯ ಬಿ.ಎಸ್. ಹಿರೇಮಠ ವಹಿಸಿ ಮಾತನಾಡಿ, ಎಲ್ಲ ಪಾಲಕರು ತಮ್ಮ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಒತ್ತು ನೀಡಿ ಮಕ್ಕಳ ಚಲನವಲನಗಳ ಬಗ್ಗೆ ಗಮನ ಕೊಡಬೇಕು. ಮಕ್ಕಳಿಗೆ ಮೊಬೈಲ್ ಬಳಕೆ ಮಾಡಲು ಮಹಾವಿದ್ಯಾಲಯದಲ್ಲಿ ಅವಕಾಶವಿಲ್ಲ. ಕಾಲೇಜಿನ ನಿಯಮಾವಳಿಗಳನ್ನು ಮೀರುವಂತಿಲ್ಲ. ನಿಮ್ಮ ಮಕ್ಕಳ ಘಟಕ ಪರೀಕ್ಷೆಗಳ ಫಲಿತಾಂಶವನ್ನು ವೀಕ್ಷಿಸಿ ಮುಂದಿನ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಬರುವ ರೀತಿಯಲ್ಲಿ ಅಧ್ಯಯನ ಮಾಡಿಸಿ ಎಂದರು.

ಆಡಳಿತಾಧಿಕಾರಿ ಕಿಶೋರ ಮುದಗಲ್ಲ ಮಾತನಾಡಿ, ವಿದ್ಯಾರ್ಥಿಗಳು ಸಾಧನೆಯತ್ತ ಸಾಗಬೇಕಾದರೆ ಮುಂದೆ ಗುರಿ, ಹಿಂದೆ ಗುರು ಇರಬೇಕು ಎಂಬಂತೆ ತಮ್ಮೆಲ್ಲರಿಗೆ ಉಪನ್ಯಾಸಕರು ಹಾಗೂ ಪ್ರಾಚಾರ್ಯರು ತಮಗೆ ದಾರಿದೀಪವಾಗಿ ಕಾರ್ಯನಿರ್ವಹಿಸುವರು ಎಂದರು.

ಈ ಸಂದರ್ಭದಲ್ಲಿ ಸಂಯೋಜಕಿ ಪ್ರೊ. ಶಾಹೀದಾ ಶಿರಹಟ್ಟಿ ವಿದ್ಯಾರ್ಥಿಗಳ ಘಟಕ ಪರೀಕ್ಷೆಗಳ ಫಲಿತಾಂಶವನ್ನು ಪಾಲಕರಿಗೆ ವಿವರಿಸಿದರು. ಪ್ರೊ. ರಾಘವೇಂದ್ರ ನವಲಗುಂದ, ಪ್ರೊ. ಶ್ರೀಕಾಂತ ಐಲಿ, ಪ್ರೊ. ರಶ್ಮಿ ಹೂಗಾರ, ಪ್ರೊ. ಸುಜಾತಾ ಇಂಡಿ, ಪ್ರೊ. ಕೆ. ಜಾಧವ, ಪ್ರೊ. ಒ.ಒ. ಶಿರಹಟ್ಟಿ ಉಪಸ್ಥಿತರಿದ್ದರು.

### ಅಮೃತ ಭೋಜನ-ಜ್ಞಾನಸಿಂಚನ ಮಾಲಿಕೆ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ

# ಪುಸ್ತಕಗಳು ಕೇವಲ ನಿರ್ಜೀವ ವಸ್ತುಗಳಲ್ಲ

■ವಿಜಯಸಾಕ್ಷಿ ಸುದ್ದಿ, ಗದಗ

ಜ್ಞಾನಾಚರಣೆಯ ಮಾಧ್ಯಮದ ಪ್ರಮುಖ ಸಾಧನವೇ ಪುಸ್ತಕಗಳು. ಪುಸ್ತಕ ಹಾಗೂ ಪುಸ್ತಕ ಸಂಸ್ಕೃತಿ, ಇವುಗಳ ಓದು ನಮ್ಮೆಲ್ಲರ ಬದುಕಿನಲ್ಲಿ ಅತ್ಯಗತ್ಯವಾಗಿವೆ. ವಿದ್ಯಾವಂತ ಸಮಾಜಕ್ಕೆ ಉತ್ತಮ ಪುಸ್ತಕಗಳ ಓದು ಅವಶ್ಯ. ಓದುವ ಹವ್ಯಾಸವು ವಿದ್ಯಾರ್ಥಿಗಳಲ್ಲಿ ಜ್ಞಾನದ ಹರಿವನ್ನು ಇಮ್ಮಡಿಗೊಳಿಸುತ್ತವೆ. ಮಕ್ಕಳು ಓದುವ ಹವ್ಯಾಸವನ್ನು ಅಳವಡಿಸಿಕೊಂಡು ಜ್ಞಾನವನ್ನು ವೃದ್ಧಿಸಿಕೊಳ್ಳಬೇಕು ಎಂದು ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ವಿ. ಶೆಟ್ಟೆಪ್ಪನವರ ಹೇಳಿದರು.

ಅವರು ಸೋಮವಾರ ಗದುಗಿನ ಹಿರಿಯ ಪ್ರಾಥಮಿಕ ಶಾಲೆ ನಂ.10ರಲ್ಲಿ ಗದಗ ಜಿಲ್ಲಾ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆಯಿಂದ ಜರುಗಿದ ಅಮೃತ ಭೋಜನ-ಜ್ಞಾನ ಸಿಂಚನ ಕಾರ್ಯಕ್ರಮ ಮಾಲಿಕೆ-27ರ ಅಧ್ಯಕ್ಷತೆ ವಹಿಸಿ ವಿದ್ಯಾರ್ಥಿಗಳಿಗಾಗಿ ಸಾಹಿತ್ಯ, ಕಥೆಗಳ ಓದು ಕಾರ್ಯಕ್ರಮದಲ್ಲಿ ಮಾತನಾಡಿದರು.



ಪುಸ್ತಕಗಳು ಆಯಾ ಕಾಲಗಳ ಸಂಸ್ಕೃತಿಯ ಜೀವಂತ ಪ್ರತೀಕ. ಒಂದು ಕಾಲಮಾನದ ನಿಖರ ಮಾಹಿತಿ ನಮಗೆ ತಿಳಿದುಬರುವುದು ಪುಸ್ತಕಗಳಿಂದ. ಪುಸ್ತಕಗಳು ಕೇವಲ ನಿರ್ಜೀವ ವಸ್ತುಗಳಲ್ಲ. ಅವು ವ್ಯಕ್ತಿಯ ವ್ಯಕ್ತಿತ್ವವನ್ನು ಶ್ರೇಷ್ಠ ಮಟ್ಟಕ್ಕೆ ಒಯ್ಯುವ ಜೀವ ಸೆಲೆಗಳಾಗಿವೆ. ಮಕ್ಕಳು ಗ್ರಂಥಾಲಯಗಳ ಸದ್ಬಳಕೆ, ಸಾಧಕರ ಜೀವನ ಚರಿತ್ರೆ, ನೀತಿ ಕಥೆಗಳಂತಹ ಪುಸ್ತಕಗಳನ್ನು ಓದುವುದನ್ನು ರೂಢಿಸಿಕೊಳ್ಳಬೇಕು ಎಂದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ರಾಷ್ಟ್ರ ಪ್ರಶಸ್ತಿ ವಿಜೇತ, ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎನ್. ಬಳ್ಳಾರಿ ಮಾತನಾಡಿ, ಬಾಲ್ಯಾವಸ್ಥೆಯಲ್ಲಿಯೇ ಓದಿನ ಗೀಳು ರೂಢಿಸಿಕೊಳ್ಳಬೇಕು. ಸತತ ಓದು, ಓದುವ ಪದ್ಧತಿ ಬಹಳ ಮುಖ್ಯ. ತಪ್ಪಿಲ್ಲದಂತೆ ಓದುವುದು ಒಂದು ಕಲೆ. ಕಥೆ, ಕವನ, ಪಾಠ, ಪದ್ಯ ಓದುವುದು ಒಳ್ಳೆಯದು. ಮಕ್ಕಳು ತಾವು ಓದಿದ ಪುಸ್ತಕಗಳ ಕುರಿತು ಸ್ನೇಹಿತರು, ಶಿಕ್ಷಕರು ಹಾಗೂ ಪಾಲಕರೊಂದಿಗೆ ಚರ್ಚಿಸುವುದರಿಂದ ವಿಚಾರಗಳು ಪರಸ್ಪರ ವಿನಿಮಯಗೊಂಡು ತಾರ್ಕಿಕ ಮನೋಭಾವ ಮೂಡಿ ಬರುತ್ತದೆ ಎಂದರು.

ಸಂಪನ್ಮೂಲ ವ್ಯಕ್ತಿ ಎಂ.ಎ. ಯರಗುಡಿ ಮಾತನಾಡಿ, ಮಕ್ಕಳು ಪ್ರತಿದಿನ ಪಠ್ಯಪುಸ್ತಕದ ಜೊತೆಗೆ ವಿವಿಧ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು. ಗ್ರಂಥಾಲಯಕ್ಕೆ ಭೇಟಿಕೊಟ್ಟು ಪುಸ್ತಕ ಭಂಡಾರದ ಪರಿಚಯ ಮಾಡಿಕೊಳ್ಳಬೇಕು. ಮಕ್ಕಳಿಗೆ ಪ್ರಿಯವಾದ ಪಂಚತಂತ್ರ ಕಥೆಗಳನ್ನು ಓದಿ ಮನನ ಮಾಡಿಕೊಳ್ಳಬೇಕು. ಕಥೆ ಓದಿ ಕಥೆ ಹೇಳುವ ಶೈಲಿಯನ್ನು ಕಲಿಯಬೇಕು ಎಂದರು.

ಸಂಪನ್ಮೂಲ ವ್ಯಕ್ತಿ ಪಿ.ಡಿ. ಮಂಗಳೂರ ಪ್ರಾಸ್ತಾವಿಕವಾಗಿ ಮಾತನಾಡಿ, ಪುಸ್ತಕಗಳು ಜಗತ್ತನ್ನೇ ಆಳುತ್ತವೆ. ಓದುವ ಹವ್ಯಾಸ ಇನ್ನಷ್ಟು ವೃದ್ಧಿಯಾಗಲು ಮನೆಯ ಹಿರಿಯರಿಂದ ಕಥೆ, ಅವರ ಜೀವನದ ಅನುಭವವನ್ನು ಕೇಳಿ ಅದನ್ನು ಲಿಖಿತವಾಗಿ ಬರೆದಿಡುವುದು ಒಳ್ಳೆಯದು. ಶಾಲೆಯಲ್ಲಿ ಓದಿರುವುದನ್ನು ಸಹಪಾಠಿಗಳೊಂದಿಗೆ ಚರ್ಚಿಸಿ ದಾಖಲಿಸಿಕೊಂಡರೆ ಮುಂದೆ ಪರೀಕ್ಷೆಯಲ್ಲಿ ಯಶಸ್ಸು ಸುಲಭವಾಗುವುದು ಎಂದರು.

ಶಾಲಾ ಮುಖ್ಯೋಪಾಧ್ಯಾಯ ಎಫ್.ಎ. ನಮಾಜಿ ಮಾತನಾಡಿ, ಕದಳಿಶ್ರೀ ವೇದಿಕೆಯು ಶಾಲೆಗಳಲ್ಲಿ ಅಮೃತ ಭೋಜನ-ಜ್ಞಾನ ಸಿಂಚನದಂತಹ ಕಾರ್ಯಕ್ರಮಗಳನ್ನು ಏರ್ಪಡಿಸಿ ಮಕ್ಕಳಿಗೆ ಇಂದು ಕಥೆ ಹೇಳುವ, ಓದುವ ಹವ್ಯಾಸದ ಕುರಿತು ಉಪನ್ಯಾಸ ಏರ್ಪಡಿಸಿ ಕಲಿಕಾ ಸಾಮಗ್ರಿ ಜೊತೆಗೆ ಮಕ್ಕಳಿಗೆ ಸಿಹಿ ಭೋಜನ ವಿತರಿಸಿದ್ದು, ಇದು ಮಕ್ಕಳ ಕಲಿಕೆಗೆ ಇನ್ನಷ್ಟು ಪ್ರೋತ್ಸಾಹ ನೀಡುತ್ತಿದೆ ಎಂದರು.

ಕಾರ್ಯಕ್ರಮದ ಪ್ರಾಯೋಜಕತ್ವ ವಹಿಸಿಕೊಂಡಿದ್ದ ಬೃಂದಾ ಮುಧೋಳರನ್ನು ಕದಳಿಶ್ರೀ ವೇದಿಕೆಯಿಂದ ಸನ್ಮಾನಿಸಿ ಗೌರವಿಸಲಾಯಿತು. ಅನ್ನಪೂರ್ಣ ಶಿಂಗಟಾಲಕೇರಿ ಸ್ವಾಗತಿಸಿದರು. ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ನಿರೂಪಿಸಿ ವಂದಿಸಿದರು. ನೀಲಮ್ಮ ಗುಜ್ಜಾಯಿ, ಸುಧಾ ಗುತ್ತಿ, ದಿಲ್‌ಶಾದ್ ಹಳ್ಳಾಳ, ರಾಧಾ ಕಟ್ಟಿಮನಿ, ಬಿಎಡ್ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

> ಕಲಿಕಾ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಪಿ. ಪ್ರಭಯ್ಯನಮಠ, ಪುಸ್ತಕಗಳು ಜೀವನದಲ್ಲಿ ಪ್ರಭಾವ ಬೀರಬಲ್ಲ ಉತ್ತಮ ಸಾಧನ. ಬೌದ್ಧಿಕ ಹಾಗೂ ಸಾಂಸ್ಕೃತಿಕ ಸಂಪನ್ಮೂಲಗಳಾಗಿವೆ. ಉತ್ತಮ ಸ್ನೇಹಿತನಂತೆ ಇವು ನಮಗೆ ಸಹಕಾರಿಯಾಗುತ್ತವೆ. ಪುಸ್ತಕವು ಹೇಳುತ್ತದೆ ನನ್ನನ್ನು ತಲೆತಗ್ಗಿಸಿ ಏಕಾಗ್ರತೆಯಿಂದ ಓದು, ನಾನು ನಿನ್ನನ್ನು ತಲೆ ಎತ್ತಿ ನಿಲ್ಲುವಂತೆ ಮಾಡುತ್ತೇನೆ ಎಂದು. ಹೀಗಾಗಿ ಮಕ್ಕಳು ಸರಿಯಾದ ಪದ್ಧತಿ ಉಪಯೋಗಿಸಿ ತಪ್ಪಿಲ್ಲದಂತೆ ಓದುವ ರೂಢಿ ಮಾಡಿಕೊಳ್ಳಬೇಕು ಎಂದರು.

## ಇನಾಮತಿ ಪ್ರೌಢಶಾಲೆಗೆ ವೀರಾಗ್ರಣಿ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕುರ್ತಕೋಟಿ ಗ್ರಾಮದ ಮನೋಹರ ಇನಾಮತಿ ಪ್ರೌಢಶಾಲೆ ಮೈದಾನದಲ್ಲಿ ನಡೆದ 2025-26ನೇ ಸಾಲಿನ ಹುಲಕೋಟಿ ವಲಯ ಮಟ್ಟದ ಪ್ರೌಢಶಾಲಾ ಕ್ರೀಡಾಕೂಟದಲ್ಲಿ ಇನಾಮತಿ ಪ್ರೌಢಶಾಲೆ ಸಮಗ್ರ ವೀರಾಗ್ರಣಿ ಪ್ರಶಸ್ತಿ ಪಡೆದಿದೆ.

**ಪುರುಷರ ವಿಭಾಗ:** 100 ಮೀಟರ್ ಓಟದಲ್ಲಿ ಸಂಜಯ್ ಗಣಚಾರಿ ದ್ವಿತೀಯ, 800 ಮೀ ಓಟದಲ್ಲಿ ಮುಸ್ತಾಕ್ ಹಣಗಿ ಪ್ರಥಮ, 1500 ಮೀ. ಓಟದಲ್ಲಿ ತರುಣ್ ಜಕ್ಕಲಿ ಪ್ರಥಮ, ಮಾಂತೇಶ ಈರಗಾರ ಮತ್ತು ನಡಿಗೆಯಲ್ಲಿ ಅಭಿಷೇಕ ಹಿರೇತನ ದ್ವಿತೀಯ ಸ್ಥಾನ ಗಳಿಸಿದ್ದಾರೆ.

ಅಡತಡೆ ಓಟದಲ್ಲಿ ಮಲ್ಲಪ್ಪ ಶಿರಹಟ್ಟಿ ಪ್ರಥಮ, ಸಂಜಯ್ ಗಣಾಚಾರಿ ದ್ವಿತೀಯ, ಸರಪಳಿ ಗುಂಡು ಎಸೆತದಲ್ಲಿ ಆಕಾಶ ಪೂಜಾರ ಪ್ರಥಮ, ಪ್ರಜ್ವಲ್ ಕೋಳಿವಾಡ ತೃತೀಯ ಹಾಗೂ ಚಕ್ರ ಎಸೆತ ಸ್ಪರ್ಧೆಯಲ್ಲಿ ಆಕಾಶ ಪೂಜಾರ ದ್ವಿತೀಯ ಸ್ಥಾನ ಪಡೆದಿದ್ದಾರೆ.

ರಿಲೇ ಓಟದಲ್ಲಿ ಕೃಷ್ಣ ಪೂಜಾರ ಪ್ರಥಮ, ಉದ್ದ ಜಿಗಿತದಲ್ಲಿ ಹಾಗೂ ಟ್ರಿಪಲ್ ಜಂಪ್‌ನಲ್ಲಿ ದ್ವಿತೀಯ, ಜಾವಲಿನ್ ಎಸೆತದಲ್ಲಿ ಪ್ರಜ್ವಲ್ ಕೋಳಿವಾಡ ತೃತೀಯ, ಬಾಲಕರ ಥ್ರೋಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನವನ್ನು ಗಳಿಸಿದೆ.

**ಬಾಲಕಿಯರ ವಿಭಾಗ:** 400, 1,500 ಮತ್ತು 3,000 ಮೀ. ಓಟದಲ್ಲಿ ಶಿಲ್ಪಾ ಕಂಬಾರ ಪ್ರಥಮ, 200 ಮೀ ಓಟದಲ್ಲಿ ಬಾನು ಹಂಚಿನಾಳ ತೃತೀಯ, ನಡಿಗೆಯಲ್ಲಿ ಪ್ರಭಾವತಿ ಮ್ಯಾಗೇರಿ ದ್ವಿತೀಯ, ಗುಂಡು ಎಸೆತದಲ್ಲಿ ಸವಿತಾ ಕಬಳ್ಳಿ ದ್ವಿತೀಯ ಸ್ಥಾನ ಪಡೆದು ಕೀರ್ತಿ ತಂದಿದ್ದಾರೆ.

ಸರಪಳಿ ಗುಂಡು ಎಸೆತದಲ್ಲಿ ಸಂಜನಾ ಪ್ರಭೇನ್ಮಠ ತೃತೀಯ, ಚಕ್ರ ಎಸೆತದಲ್ಲಿ ಮಾಬೂಬಿ ನಮಾಜಿ ಪ್ರಥಮ, ಸುಕನ್ಯ ಅಣ್ಣಿಗೇರಿ ಉದ್ದ ಜಿಗಿತದಲ್ಲಿ ದ್ವಿತೀಯ, ಎತ್ತರ ಜಿಗಿತದಲ್ಲಿ ತೃತೀಯ, ಟ್ರಿಪಲ್ ಜಂಪ್‌ನಲ್ಲಿ ಶಾಹಿನ್ ನದಾಫ್ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಬಲ್ಲೆ ಎಸೆತದಲ್ಲಿ ತೇಜಸ್ವಿನಿ ಮಹಾಲಿಂಗಪುರ ಪ್ರಥಮ ಹಾಗೂ ಚಕ್ರ ಎಸೆತದಲ್ಲಿ ತೃತೀಯ ಸ್ಥಾನ ಪಡೆದಿದ್ದಾಳೆ. ಗುಂಪು ವಿಭಾಗದ ಥ್ರೋಬಾಲ್, ವಾಲಿಬಾಲ್‌ನಲ್ಲಿ ಪ್ರಥಮ ಸ್ಥಾನ ಪಡೆದಿದೆ. ಸಾಧಕ ಕ್ರೀಡಾಪಟುಗಳಿಗೆ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

### ಎಫ್.ಎಂ. ಡಬಾಲಿ ಪ.ಪೂ ಮಹಾವಿದ್ಯಾಲಯದಲ್ಲಿ ವಿವಿಧ ಚಟುವಟಿಕೆಗಳ ಪ್ರಾರಂಭೋತ್ಸವ

# ಸದೃಢ ವ್ಯಕ್ತಿತ್ವ ರೂಪಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ವಿದ್ಯಾರ್ಥಿ ಜೀವನದಲ್ಲಿ ಸೃಜನಶೀಲತೆ ಮುಖ್ಯ. ಇಂದಿನ ಆಧುನಿಕ ತಂತ್ರಜ್ಞಾನವನ್ನು ಕ್ರಿಯಾಶೀಲತೆಯಿಂದ ಸದ್ಬಳಕೆ ಮಾಡಿಕೊಂಡು ಸದೃಢ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ವಿದ್ಯಾರ್ಥಿಗಳು ಸತತ ಅಧ್ಯಯನಶೀಲತೆಯಿಂದ ಎಲ್ಲ ಆಯಾಮಗಳಲ್ಲಿ ಸಾಮರ್ಥ್ಯಗಳನ್ನು ಬೆಳೆಸಿಕೊಂಡು ಆಧುನಿಕ ಜಗತ್ತಿನ ಸವಾಲುಗಳಿಗೆ ಸನ್ನದ್ಧರಾಗಬೇಕು. ವಿದ್ಯಾರ್ಥಿ ಜೀವನವನ್ನು ವ್ಯರ್ಥ ಮಾಡದೆ ಜ್ಞಾನದ ಅನ್ವೇಷಣೆಗಾಗಿ ಮೀಸಲಿಡಬೇಕು ಎಂದು ಪ್ರೊ. ಸಿದ್ದು ಯಾಪಲಪರವಿ ಕಿವಿಮಾತು ಹೇಳಿದರು.



ಪಟ್ಟಣದ ಎಫ್.ಎಂ. ಡಬಾಲಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ 2025-26ನೇ ಸಾಲಿನ ಶೈಕ್ಷಣಿಕ ವರ್ಷದ ಕ್ರೀಡಾ/ಸಾಂಸ್ಕೃತಿಕ ಚಟುವಟಿಕೆಗಳ ಪ್ರಾರಂಭೋತ್ಸವ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ಪದವಿಪೂರ್ವ ಉಪನ್ಯಾಸಕರ ಸಂಘದ ಅಧ್ಯಕ್ಷ ಸುರೇಶರಡ್ಡಿ ಸೋಮಣ್ಣವರ ಮಾತನಾಡುತ್ತಾ, ವಿದ್ಯಾರ್ಥಿಗಳು ಏಕಾಗ್ರತೆಯಿಂದ ಕಲಿಕೆಯಲ್ಲಿ ತೊಡಗಿದಾಗ ಸಂಕೀರ್ಣ ವಿಷಯವನ್ನು ಸರಳಗೊಳಿಸಬಹುದು. ಕೇವಲ ಅಂಕ ಗಳಿಕೆಗೆ ಮಹತ್ವ ನೀಡದೆ ಸಂಪೂರ್ಣ ವ್ಯಕ್ತಿತ್ವ ವಿಕಾಸದ ಕಡೆಗೆ ಮಕ್ಕಳು ಗಮನಹರಿಸಬೇಕು ಎಂದರು.

ಅತಿಥಿಗಳಾಗಿ ಆಗಮಿಸಿದ ಸರ್ಕಾರಿ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಬಿ.ಜಿ. ಗಿರಿತಮ್ಮಣ್ಣವರ ಮಾತನಾಡುತ್ತಾ, ಸ್ಪರ್ಧಾತ್ಮಕ ಜಗತ್ತಿನಲ್ಲಿ ವಿದ್ಯಾರ್ಥಿಗಳು ಕಲಿಕೆಯ ಸದುಪಯೋಗವನ್ನು ಪಡೆಯಬೇಕು. ತಮ್ಮಲ್ಲಿರುವ ವಿಶೇಷ ಸಾಮರ್ಥ್ಯವನ್ನು ಅನಾವರಣಗೊಳಿಸುವ ಕಡೆಗೆ ಗಮನಹರಿಸಬೇಕು ಎಂದರು.

> ಸಂಸ್ಥೆಯ ಆಡಳಿತಾಧಿಕಾರಿ ಐ.ಬಿ. ಬೆನಕೊಪ್ಪ ಮಾತನಾಡುತ್ತಾ, ವಿದ್ಯಾರ್ಥಿಗಳು ಪದವಿಪೂರ್ವ ಹಂತದಲ್ಲಿ ಸರಿಯಾದ ಮಾರ್ಗದಲ್ಲಿ ಮುನ್ನಡೆದರೆ ಮುಂದಿನ ಭವಿಷ್ಯ ಸುಂದರವಾಗಿರುತ್ತದೆ. ಮೊಬೈಲ್ ವ್ಯಸನಿಗಳಾಗದೆ, ಕಲಿಕಾ ವಿಷಯಗಳಲ್ಲಿ ನಿರಂತರ ಪರಿಶ್ರಮಗಳಾಗಬೇಕು ಹಾಗೂ ಉತ್ತಮ ಫಲಿತಾಂಶದೊಂದಿಗೆ ಸಂಸ್ಥೆಗೆ ಗೌರವ ತರುವ ವ್ಯಕ್ತಿಗಳಾಗಬೇಕು ಎಂದರು.

ಕಾಲೇಜಿನ ಪ್ರಾಚಾರ್ಯ ಎಂ.ಸಿ. ಭಜಂತ್ರಿ ಮಾತನಾಡುತ್ತಾ, ತಮ್ಮಲ್ಲಿರುವ ಸಾಮರ್ಥ್ಯಗಳನ್ನು ಅರಿತು ಸ್ಪರ್ಧೆಯಲ್ಲಿ ಪಾಲ್ಗೊಂಡಾಗ ಆತ್ಮವಿಶ್ವಾಸ ಮೂಡುತ್ತದೆ. ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಪಾಲ್ಗೊಂಡಾಗ ಕಲಿಕೆ ಮತ್ತಷ್ಟು ಅರ್ಥಪೂರ್ಣವಾಗುತ್ತದೆ ಎಂದರು.

ಸೇವಾ ನಿವೃತ್ತಿ ಹೊಂದಿದ ದೈಹಿಕ ಶಿಕ್ಷಣ ಉಪನ್ಯಾಸಕ ಎಂ.ಕೆ. ಲಮಾಣಿ ಅವರನ್ನು ಗೌರವಿಸಲಾಯಿತು. ಸಾವಿತ್ರಿಬಾಯಿ ಫುಲೆ ರೇಂಜರ್ಸ್ ಘಟಕದ ವಿದ್ಯಾರ್ಥಿನಿಯರಿಂದ ವಿವಿಧ ಕರಕುಶಲ ವಸ್ತು ಪ್ರದರ್ಶನ ನಡೆಯಿತು. ರಾಜ್ಯಮಟ್ಟದ ವಚನ ಕಮ್ಮಟ ಪರೀಕ್ಷೆಯಲ್ಲಿ ವಿಶೇಷ ಸಾಧನೆಗೈದ 22 ವಿದ್ಯಾರ್ಥಿಗಳಿಗೆ ಪ್ರಶಸ್ತಿಪತ್ರವನ್ನು ವಿತರಿಸಲಾಯಿತು.

ವಿಶೇಷ ಸಾಧನೆ ಮಾಡಿದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕರಿಸಲಾಯಿತು. ಪ್ರಥಮ ಪಿಯುಸಿ ವಿಭಾಗದಲ್ಲಿ ಕಿರಣ್ ಬಾನು ಮಲ್ನಾಡದ, ನಫೀಜಾ ಡಾಲಾಯತ, ಸುಜಾತ ಆದಿ, ದ್ವಿತೀಯ ಪಿಯುಸಿ ವಿಭಾಗದಲ್ಲಿ ಮಧು ಗಾಣಿಗೇರ, ರುದ್ರಪ್ಪ ಬುರ್ಜಿ, ರೇಷ್ಮಾ ಪಠಾಣ್ ಇವರನ್ನು, ಕ್ರೀಡಾಕೂಟದಲ್ಲಿ ವೀರಾಗ್ರಣಿಯಾದ ವೀರಯ್ಯ ಎಸ್.ಕಲ್ಲೂರ್‌ರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಆಡಳಿತ ಮಂಡಳಿಯ ಸದಸ್ಯರಾದ ಡಾ. ಸುರೇಶ್ ಎಸ್.ಡಬಾಲಿ, ಗಿರೀಶ್ ಎಂ.ಡಬಾಲಿ, ಎಸ್.ವೈ. ಪಾಟೀಲ್, ವಿ.ವಿ. ಅಮರ ಶೆಟ್ಟರ, ಸುಮಾ ಡಬಾಲಿ, ಗೌರವ ಕಾರ್ಯದರ್ಶಿ ಎನ್.ಆರ್. ಕುಲಕರ್ಣಿ, ಮುಖ್ಯೋಪಾಧ್ಯಾಯರಾದ ಆರ್.ಎಫ್. ಬಡಕುರ್ಕಿ, ಎನ್.ಹೆಚ್. ಶಿಗ್ಲಿ ಉಪಸ್ಥಿತರಿದ್ದರು. ತೇಜಸ್ವಿನಿ ಬಂಕಾಪುರ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಉಪನ್ಯಾಸಕರಾದ ಎನ್ ಹನುಮರಡ್ಡಿ ಸ್ವಾಗತಿಸಿದರು. ಕಾರ್ಯಕ್ರಮವನ್ನು ಸಾಂಸ್ಕೃತಿಕ ವಿಭಾಗದ ಮುಖ್ಯಸ್ಥರಾದ ಸುಧಾ ಹುಚ್ಚಣ್ಣವರ ನಿರೂಪಿಸಿದರು. ಬಹುಮಾನ ವಿತರಣೆ ಕಾರ್ಯಕ್ರಮವನ್ನು ಉಪನ್ಯಾಸಕರಾದ ವೈ.ಎಸ್. ಪಂಗಣ್ಣವರ, ಪಿ.ಎನ್. ಕುಲಕರ್ಣಿ, ಎಂ.ಎಂ. ನದಾಫ್, ಬಸವರಾಜ್ ಶಿರುಂದ್, ಎಫ್.ಎ. ಬಾಬುಖಾನವರ, ಸಿಬ್ಬಂದಿ ಪಿ.ವಿ. ಹೊಸೂರ್ ನಡೆಸಿಕೊಟ್ಟರು.

## ನಾಳೆ ಅನ್ನ ಸಂತರ್ಪಣೆ, ಸಾಂಸ್ಕೃತಿಕ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

2025ನೇ ಸಾಲಿನ ಗಣೇಶೋತ್ಸವದ ಅಂಗವಾಗಿ ಬೆಟಗೇರಿ ಗಜಪತಿ ಮಹಾರಾಜ್ ಮಿತ್ರ ಮಂಡಳ

ಬಸವನಗುಡಿ ಬಡಾವಣೆ ಗಜಾನನೋತ್ಸವ ಸಮಿತಿ ವತಿಯಿಂದ 17ನೇ ವರ್ಷದ ಗಣೇಶೋತ್ಸವದ ಪ್ರಯುಕ್ತ ಅನ್ನ ಸಂತರ್ಪಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ದಿನಾಂಕ 03-09-25 ಬುಧವಾರ ಮಧ್ಯಾಹ್ನ ಮಹಾ ಅನ್ನಸಂತರ್ಪಣೆ ಹಾಗೂ ಸಂಜೆ 5 ಗಂಟೆಯಿಂದ ಚಿಕ್ಕ ಮಕ್ಕಳಿಂದ



ಸಾಂಸ್ಕೃತಿಕ ಕಾರ್ಯಕ್ರಮ ನಂತರ 121 ಉಡುಗೊರೆಗಳನ್ನು ಸವಾಲಿನ ಬದಲಿಗೆ ಕೃಪಾಶೀರ್ವಾದ(ಡ್ರಾ) ರೂಪದಲ್ಲಿ 9 ದಿನಗಳ ಪೂಜಿಸಿದ ಆಭೂಷಣಗಳ ಡ್ರಾ ನಡೆಯುವುದು. ಕಳೆದ ನಾಲ್ಕೈದು ದಿನಗಳಿಂದ ನಡೆದ ಎಲ್ಲಾ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಸ್ಪರ್ಧಾಳುಗಳಿಗೆ ಬಹುಮಾನ ವಿತರಣೆ, ಹಿರಿಯರಿಗೆ (ಗಣ್ಯರಿಗೆ) ದಾನಿಗಳಿಗೆ, ಅತಿಥಿಗಳಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಗಜಪತಿ ಮಹಾರಾಜ ಮಿತ್ರ ಮಂಡಳಿ ಸದಸ್ಯರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ಇವರ ಸಹಯೋಗದಲ್ಲಿ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟೆಂಬರ್ 3 ಹಾಗು 4ರಂದು ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾಯಕ್ರಮದ ಉದ್ಘಾಟನೆಯು ಸೆಪ್ಟೆಂಬರ್ 3 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಲಿದೆ.


ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ಗದಗ -ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್ ರಾಜ್‌ಸಿಂಗ್, ಯೋಜನೆ ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತ ಚೇತನ್ ಆರ್ ಆಗಮಿಸುವರು.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.



ಶ್ರೀ ಜಾಗೃತ ಗಜಾನನ ಯುವಕ ಮಂಡಳಿ ಸಿದ್ಧಲಿಂಗ ನಗರ 1ನೇ ಕ್ರಾಸ್‌ನಲ್ಲಿ ಪ್ರತಿಷ್ಠಾಪಿಸಿದ ಗಣಪತಿ



ಕಳೆದ ಐದು ದಿನಗಳಿಂದ ಲಕ್ಕುಂಡಿಯ ಮನೆ ಮನೆಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ ವಿಘ್ನ ನಿವಾರಕ ಗಣೇಶನನ್ನು ಶ್ರದ್ಧಾ ಭಕ್ತಿಯಿಂದ ವಿಸರ್ಜನೆ ಮಾಡಲಾಯಿತು. ರವಿವಾರ ಕೊನೆಯ ದಿನ ಸಂಜೆ ಮನೆಯಲ್ಲಿಯ ಗಣೇಶ ಮೂರ್ತಿಯನ್ನು ಗುಂಪು ಗುಂಪಾಗಿ ತಲೆಯ ಮೇಲೆ ಇಟ್ಟುಕೊಂಡು ಪಟಾಕಿಗಳನ್ನು ಸಿಡಿಸಿ, ಮೆರವಣಿಗೆಯೊಂದಿಗೆ ತೆರಳಿ ಗ್ರಾಮದ ದಂಡಿನ ದುರ್ಗಾದೇವಿ ಕೆರೆ ಹಾಗೂ ಹಾಲಗೊಂಡ ಬಸವೇಶ್ವರ ಕೆರೆಯಲ್ಲಿ ವಿಧಿ ವಿಧಾನಗಳೊಂದಿಗೆ ವಿಸರ್ಜನೆ ಮಾಡಲಾಯಿತು.

## ಬಿಜೆಪಿಯವರು ಯಾರಾದರೂ ಒಬ್ಬರು ಹೋಗಿ ಬೂಕರ್ ಪ್ರಶಸ್ತಿ ತರಲಿ ನೋಡೋಣ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬಿಜೆಪಿಯವರು ಯಾರಾದರೂ ಒಬ್ಬರು ಹೋಗಿ ಬೂಕರ್ ಪ್ರಶಸ್ತಿ ತರಲಿ ನೋಡೋಣ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸವಾಲ್ ಹಾಕಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಇದು ಬಿಜೆಪಿ ಅವರ ರಾಜಕೀಯ ಅಷ್ಟೇ. ಇವರಿಗೆ ಕೆಲಸ ಇಲ್ಲ. ರಾಜಕೀಯ ಅಸ್ತಿತ್ವ ಉಳಿಸಿಕೊಳ್ಳಲು ಹೀಗೆ ಮಾತಾಡುತ್ತಿದ್ದಾರೆ ಅಷ್ಟೆ. ಬಿಜೆಪಿ ಅವರು ಯಾರಾದರು ಒಬ್ಬರು ಹೋಗಿ ಬೂಕರ್ ಪ್ರಶಸ್ತಿ ತರಲಿ ನೋಡೋಣ ಎಂದು ಸವಾಲು ಹಾಕಿದರು. ಚಾಮುಂಡೇಶ್ವರಿ ಹಿಂದೂಗಳ ಆಸ್ತಿಯಲ್ಲ ಎಂಬ ಡಿಕೆಶಿ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅನೇಕ ಕಡೆ ಕೋಮು ಸೌಹಾರ್ದತೆಗೋಸ್ಕರ ಒಟ್ಟಾಗಿ ಕೆಲಸ ಮಾಡುತ್ತಿದ್ದಾರೆ. ಹಿಂದೂಗಳು ದರ್ಗಾಕ್ಕೆ ಹೋಗುತ್ತಾರೆ.

ಮುಸ್ಲಿಮರು ದೇವಸ್ಥಾನಕ್ಕೆ ಹೋಗ್ತಾರೆ. ತಪ್ಪೇನು? ನಮ್ಮೂರಲ್ಲೂ ಇಂತಹ ಪದ್ಧತಿಗಳು ಈಗಲೂ ಇವೆ. ಎಲ್ಲಾ ದೇವರಿಗೆ ಈ ಬಿಜೆಪಿಯವರು ವಕ್ತಾರರಾಗಿದ್ದಾರೆ. ಇವರು ಮಾತಾಡೋಕೆ ಯಾರು? ಟಿಪ್ಪು, ಹೈದರ್, ಒಡೆಯರ ಕಾಲದಿಂದಲೂ ದಸರಾ ನಡೆದಿತ್ತು ಅಲ್ಲವಾ ಎಂದು ಆಕ್ರೋಶ ಹೊರಹಾಕಿದರು.

## ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷದಂತೆ ಶ್ರೀ ವಾಲ್ಮೀಕಿ ಜಯಂತಿಯಂದು ಪರಿಶಿಷ್ಟ ಪಂಗಡದ ಏಳಿಗಾಗಿ ಶ್ರಮಿಸಿದ ಪರಿಶಿಷ್ಟ ಪಂಗಡಕ್ಕೆ ಸೇರಿದ ಶೈಕ್ಷಣಿಕ, ಸಾಮಾಜಿಕ , ಸಾಹಿತ್ಯ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ದಿನಾಂಕ 7/10/2025 ರಂದು ನಡೆಯುವ ರಾಜ್ಯ ಮಟ್ಟದ ಶ್ರೀ ವಾಲ್ಮೀಕಿ ಜಯಂತಿಯಂದು ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿ ನೀಡಲಾಗುತ್ತದೆ.

ಸದರಿ ಪ್ರಶಸ್ತಿಗಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ 10/9/2025 ಆಗಿರುತ್ತದೆ. ನಿಗದಿಪಡಿಸಿದ ದಿನಾಂಕದೊಳಗಾಗಿ ಅರ್ಜಿಗಳನ್ನು ಸಲ್ಲಿಸಲು ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ ಸಮಾಜ ಕಲ್ಯಾಣ ಇಲಾಖೆ ಗದಗ ರೂಮ್ ನಂಬರ್ 107 ಇಲ್ಲಿಗೆ ಸಲ್ಲಿಸಲು ಕೋರಿದೆ.

## ನಿಧನ

### ಮೀನಾಕ್ಷಿ ಕೋಟೆಪ್ಪ ಕೊಟಗಿ



**ನರೇಗಲ್ಲ:** ಪಟ್ಟಣದ ತ್ರಿಪುಕಾಂತೇಶ್ವರ ಓಣಿಯ ನಿವಾಸಿ ಮೀನಾಕ್ಷಿ ಕೋಟೆಪ್ಪ ಕೊಟಗಿ (58) ಸೋಮವಾರ ನಿಧನ ಹೊಂದಿದರು. ಅವರಿಗೆ ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ.

## ಶ್ರೀ ವರಸಿದ್ಧಿ ವಿನಾಯಕನಿಗೆ ಪಡಿ ಪೂಜೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ



ಇಲ್ಲಿನ ಬಸವೇಶ್ವರ ನಗರದ ಶ್ರೀ ವರಸಿದ್ಧಿ ವಿನಾಯಕ ಮಿತ್ರ ಮಂಡಳಿ ವತಿಯಿಂದ 133ನೇ ವರ್ಷದ ಸಾರ್ವಜನಿಕ ಹಾಗೂ ನಮ್ಮ ಮಂಡಳಿಯ 27ನೇ ವರ್ಷದ ಗಣೇಶೋತ್ಸವ-2025ರ ಅಂಗವಾಗಿ ಸೆ.2ರ ಸಂಜೆ 7ಕ್ಕೆ ಗಣೇಶನಿಗೆ ಪ್ರಿಯವಾದ ಪಡಿ ಪೂಜೆ ಹಾಗೂ ಮಹಾ ಮಂಗಳಾರತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಪೂಜಾ ಕಾರ್ಯಕ್ರವನ್ನು ಶ್ರೀ ಸೋಮೇಶ್ವರ ದೇವಸ್ಥಾನದ ಅರ್ಚಕರಾದ ಪ್ರದೀಪ ಹಿರೇಮಠ, ರಾಚಯ್ಯ ಬಾಗಲಕೋಟಮಠ ಅವರ ನೇರವೆರಿಸಿಲಿದ್ದಾರೆ. ಈ ಧಾರ್ಮಿಕ ಕಾರ್ಯಕ್ಕೆ ಶ್ರೀ ಸೋಮೇಶ್ವರ ಸೇವಾ ಸಮಿತಿ ಸಹಕಾರ ನೀಡಲಿದೆ. ಅವಳಿ ನಗರದ ಸಕಲ ಸದ್ಭಕ್ತರು ಈ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಾಗಿ ಮಂಡಳಿ ಅಧ್ಯಕ್ಷ ರಾಜು ರೊಟ್ಟಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.



ಲಕ್ಷ್ಮೇಶ್ವರ ಪಟ್ಟಣದಲ್ಲಿ ರವಿವಾರ ಗಣೇಶ ಮೂರ್ತಿಗಳ ವಿಸರ್ಜನೆ ಕಾರ್ಯವು ಶಾಂತಿಯುತವಾಗಿ ನಡೆಯಿತು. ಪೊಲೀಸ್ ಠಾಣೆಯವರು ಮಧ್ಯಾಹ್ನದ ಹೊತ್ತಿಗೆ ಠಾಣೆಯ ಮೂರ್ತಿಯ ವಿಸರ್ಜನೆಯನ್ನು ನೆರವೇರಿಸಿದರು. ಭಾನುವಾರ ಸಿಬ್ಬಂದಿಗಳು ಪೊಲೀಸ್ ಠಾಣೆಯಿಂದ ಗಣಪತಿ ಮೂರ್ತಿಯನ್ನು ಟ್ರ್ಯಾಕ್ಟರ್‌ನಲ್ಲಿರಿಸಿ ಶಿಗ್ಲಿ ನಾಕಾವರೆಗೆ ನೃತ್ಯ ಮಾಡುತ್ತಾ ಅತ್ಯಂತ ಸರಳವಾಗಿ ವಿಸರ್ಜನೆ ಮಾಡಿ ಮಾದರಿಯಾದರು. ಈ ಸಂದರ್ಭದಲ್ಲಿ ಪಿಎಸ್ಐ ನಾಗರಾಜ ಗಡಾದ, ಅಪರಾಧ ವಿಭಾಗದ ಪಿಎಸ್ಐ ಟಿ.ಕೆ. ರಾಥೋಡ ಸೇರಿದಂತೆ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ನೇತ್ರ ತಪಾಸಣಾ ಶಿಬಿರ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ


ನಗರದ ವೀರಶೈವ ಲೈಬ್ರರಿ ಬಳಿ ಶ್ರೀ ಸುದರ್ಶನ ಚಕ್ರ ಯುವ ಮಂಡಳಿ ವತಿಯಿಂದ ಪ್ರತಿಷ್ಠಾಪಿಸಿರುವ ಹಿಂದೂ ಮಹಾಗಣಪತಿ ವೇದಿಕೆಯಲ್ಲಿ ಸೆ.2ರಂದು ಬೆಳಿಗ್ಗೆ 8 ಗಂಟೆಗೆ ಗಣಹೋಮ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜರುಗಲಿವೆ.

ಸೆ.3ರಂದು ಬೆಳಿಗ್ಗೆ 10 ಗಂಟೆಗೆ ಉಚಿತ ಕಣ್ಣಿನ ತಪಾಸಣಾ ಶಿಬಿರ ಆಯೋಜಿಸಲಾಗಿದ್ದು, ಆಸಕ್ತರು ಸದುಪಯೋಗಪಡಿಸಿಕೊಳ್ಳಲು ಮಂಡಳಿಯ ಪ್ರಕಟಣೆ ಕೋರಿದೆ.

### ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ಹಿನ್ನೆಲೆ

# ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

■ ವಿಜಯಸಾಕ್ಷಿ ಸುದ್ದಿ, ಗದಗ/ಬೆಂಗಳೂರು



ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು. ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಸಹಬಾಳ್ವೆ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ-ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ.

ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಿದೆ.

ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ ಬಹುಮಾನ 31 ಸಾವಿರ ರೂ, ದ್ವಿತೀಯ ಬಹುಮಾನ 21 ಸಾವಿರ ರೂ, ತೃತೀಯ ಬಹುಮಾನ 11 ಸಾವಿರ ರೂ ಹಾಗೂ ಜಿಲ್ಲಾಮಟ್ಟದಲ್ಲಿ ಪ್ರಥಮ ಬಹುಮಾನ 3 ಸಾವಿರ ರೂ. ದ್ವಿತೀಯ ಬಹುಮಾನ 2 ಸಾವಿರ ರೂ ಮತ್ತು ತೃತೀಯ ಬಹುಮಾನ 1 ಸಾವಿರ ರೂ. ಬಹುಮಾನ ನೀಡಲಾಗುವುದು.

**ಪ್ರೌಢಶಾಲಾ ವಿಭಾಗದಲ್ಲಿ:** 1) ಸ್ವಚ್ಛತೆಯ ಪಾಠ-ಗಾಂಧೀಜಿಯವರ ಸಂದೇಶ, 2) ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ, 3) ಗಾಂಧೀಜಿಯವರ ಸ್ವಾತಂತ್ರ್ಯದ ಕನಸು-ನನ್ನ ಕಲ್ಪನೆ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯದ ಕುರಿತು 700ರಿಂದ 800 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

**ಪದವಿ ಪೂರ್ವ ವಿಭಾಗದಲ್ಲಿ:** 1) ಅಸ್ಪೃಶ್ಯತೆ ನಿವಾರಣೆಯಲ್ಲಿ ಗಾಂಧೀಜಿಯವರ ಹೋರಾಟ, 2) ಇಂದಿನ ಸಮಾಜದಲ್ಲಿ ಸರ್ವೋದಯ ಮತ್ತು ಅಂತ್ಯೋದಯದ ಪ್ರಾಸಂಗಿಕತೆ, 3) ಬದಲಾವಣೆ ನನ್ನಿಂದಲೇ ಆರಂಭ-ಗಾಂಧೀಜಿಯವರ ಪಾಠ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯದ ಕುರಿತು 900ರಿಂದ 1000 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

**ಪದವಿ-ಸ್ನಾತಕೋತ್ತರ ಪದವಿ ವಿಭಾಗದಲ್ಲಿ:** 1) ಗಾಂಧೀಜಿ ಕಂಡ ನ್ಯಾಯಸಮ್ಮತ ರಾಜಕೀಯ ವ್ಯವಸ್ಥೆ, 2) ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರ್-ತತ್ವಗಳ ಹೋಲಿಕೆ, 3) ಮೌಲ್ಯಾಧಾರಿತ ನಾಯಕತ್ವ ಹಾಗೂ ನೈತಿಕ ರಾಜಕಾರಣ-ಯುವಕರಿಗೆ ಗಾಂಧೀಜಿಯವರ ಪಾಠ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯದ ಕುರಿತು 1400ರಿಂದ 1500 ಪದಗಳು ಮೀರದಂತೆ ಪ್ರಬಂಧ ಬರೆಯಬೇಕು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಎಲ್ಲಾ ಜಿಲ್ಲಾ ಕಚೇರಿಗಳು ಜಿಲ್ಲಾಡಳಿತದ ಸಹಯೋಗದೊಂದಿಗೆ 6-09-2025ರೊಳಗಾಗಿ ಸ್ಪರ್ಧೆ ಏರ್ಪಡಿಸಿ ನಂತರ ಮೌಲ್ಯಮಾಪನ ಮಾಡಿ 12-09-2025ರ ಒಳಗಾಗಿ ವಿಜೇತರ ವಿವರಗಳು ಹಾಗೂ ಪ್ರಬಂಧಗಳನ್ನು ಕೇಂದ್ರ ಕಚೇರಿಗೆ ಕಳುಹಿಸಬೇಕು. ಜಿಲ್ಲಾಮಟ್ಟದ ಪ್ರಥಮ ಬಹುಮಾನ ವಿಜೇತ ಪ್ರಬಂಧಗಳನ್ನು ರಾಜ್ಯಮಟ್ಟದಲ್ಲಿ ಮರುಮೌಲ್ಯಮಾಪನ ಮಾಡಿ ರಾಜ್ಯಮಟ್ಟದ ಫಲಿತಾಂಶ ಘೋಷಿಸಲಾಗುವುದು.

ಪ್ರತಿ ವಿಭಾಗದಲ್ಲಿನ ಅತ್ಯುತ್ತಮವಾದ ಮೂರು ಪ್ರಬಂಧಗಳಿಗೆ ಅಕ್ಟೋಬರ್ 2ರಂದು ಜಿಲ್ಲಾ ಮಟ್ಟದ ಗಾಂಧೀ ಜಯಂತಿ ದಿನಾಚರಣೆ ಸಂದರ್ಭದಲ್ಲಿ ಬಹುಮಾನ ನೀಡಿ ಪ್ರಬಂಧ ರಚನೆಕಾರರನ್ನು ಗೌರವಿಸಲಾಗುವುದು.

**ನಿಬಂಧನೆಗಳು:** ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು. ಅಕರವಾಗಿ ಬಳಸಿದ ಪರಾಮರ್ಶನ/ಅಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಆದರೆ, ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ಆಧಾರ ಗ್ರಂಥಗಳು/ಮೊಬೈಲ್‌ಗಳ ಬಳಕೆಗೆ ಅವಕಾಶವಿರುವುದಿಲ್ಲ. ಪ್ರಬಂಧಕಾರರ ಹೆಸರು, ವಿಳಾಸ ನಮೂದಿಸಿರಬೇಕು. ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾಯ್ದಿರಿಸಿಕೊಂಡಿರುತ್ತದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲೋಭದ ನಿವೃತ್ತಿಯೇ ಶೌಚಧರ್ಮ




■ ವಿಜಯಸಾಕ್ಷಿ ಸುದ್ದಿ, ಗದಗ

ಭೋಗೋಪಭೋಗ ವಸ್ತುಗಳಲ್ಲಿ ಅತ್ಯಾಸಕ್ತಿಯೇ ಲೋಭವಾಗಿದ್ದು, ಅತಿಯಾಸೆ, ಜಿಪುಣತನ ತೊರೆದು ಉದಾರ ಗುಣಗಳಿಂದ ದಾನ, ಧರ್ಮ, ಪರೋಪಕಾರದೊಂದಿಗೆ ಉತ್ತಮ ಜೀವನ ನಡೆಸುವುದೇ ಶೌಚಧರ್ಮದ ಪಾಲನೆಯಾಗಿದೆ ಎಂದು ಮಂಜುನಾಥ ಬೋಗಾರ ಹೇಳಿದರು. ಅವರು ಗದಗ ಜಿಲ್ಲಾ ದಿಗಂಬರ ಜೈನ ಸಂಘವು 'ದಶಲಕ್ಷಣ ಪರ್ವಾಚರಣೆ ಮತ್ತು ಸಮಾಜ ಸಂಪರ್ಕ ಸಭೆ' ಪ್ರಯುಕ್ತ ರೋಣದ ಪಾರ್ಶ್ವನಾಥ ಬಸದಿಯಲ್ಲಿ ಹಮ್ಮಿಕೊಂಡಿದ್ದ 'ಉತ್ತಮ ಶೌಚಧರ್ಮ' ಕುರಿತು ಮಾತನಾಡಿದರು.

ಅಧ್ಯಕ್ಷತೆ ವಹಿಸಿದ್ದ ನೇಮಿನಾಥ ಮುತ್ತಿನ ಮಾತನಾಡಿ, ಮನುಷ್ಯನು ಅತಿ ಲಾಲಸೆಗಳು, ಭೋಗಭಾಗ್ಯಗಳ ಅಪೇಕ್ಷೆ, ಲೋಭ ಇತ್ಯಾದಿಗಳ ಕಾರಣದಿಂದ ದುಃಖಿಯಾಗಿ ಅಧಃಪತನದತ್ತ ಸಾಗುತ್ತಿದ್ದು, ಲೋಲುಪತೆಯನ್ನು ತ್ಯಾಗ ಮಾಡಿದವನು ಮಾತ್ರ ಅಂತರಂಗದಲ್ಲಿ ಶುಚಿರ್ಭೂತನಾಗುತ್ತಾನೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಪಿ.ಎ. ಕುಲಕರ್ಣಿ, ಕಾರ್ಯದರ್ಶಿ ಪ್ರಕಾಶ ಮುತ್ತಿನ, ಉದ್ಯಮಿ ಅಭಿನಂದನ ಗೋಗಿ ಮತ್ತು ಸ್ಥಳೀಯ ಜೈನ ಸಮಾಜದ ಪದಾಧಿಕಾರಿಗಳು, ಹಿರಿಯರು, ಸುತ್ತಮುತ್ತಲಿನ ಗ್ರಾಮಗಳ ಶ್ರಾವಕರು, ಶ್ರಾವಿಕೆಯರು ಉಪಸ್ಥಿತರಿದ್ದರು.

## ವಿಘ್ನ ನಿವಾರಕನಿಗೆ ಅದ್ಧೂರಿ ವಿದಾಯ



■ ವಿಜಯಸಾಕ್ಷಿ ಸುದ್ದಿ, ರೋಣ

ಪಟ್ಟಣದ ವಿವಿಧ ಬಡಾವಣೆಗಳಲ್ಲಿ, ಸರಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜುಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದ ವಿಘ್ನ ನಿವಾರಕನಿಗೆ ರವಿವಾರ ಭಕ್ತರು ವಿದಾಯ ಹೇಳಿದರು.

ರೋಣ ಪೊಲೀಸ್ ಠಾಣೆ, ಸಾರಿಗೆ ಇಲಾಖೆ, ರಾಜೀವಗಾಂಧಿ ಮೆಡಿಕಲ್ ಕಾಲೇಜು ಸೇರಿದಂತೆ ಸಾರ್ವಜನಿಕ ಗಣಪತಿ ಉತ್ಸವ ಸಮಿತಿಗಳ ವಿಸರ್ಜನಾ ಮೆರವಣಿಗೆ ಸಡಗರದಿಂದ ನಡೆಯಿತು.

ಪೊಲೀಸ್ ಇಲಾಖೆಯವರು ಮಧ್ಯಾಹ್ನವೇ ಗಣೇಶ ವಿಸರ್ಜನೆ ಕಾರ್ಯವನ್ನು ನೆರವೇರಿಸಿ ತಮ್ಮ ಕರ್ತವ್ಯಕ್ಕೆ ಮರಳಿದರು.

ಈ ಬಾರಿ ಡಿಜೆಗೆ ಅವಕಾಶ ನೀಡದ ಪ್ರಯುಕ್ತ ಸ್ಥಳೀಯ ಕಲಾವಿದರಿಗೆ ಹಾಗೂ ವಾದ್ಯ ಮೇಳಗಳಿಗೆ ಹೆಚ್ಚಿನ ಅವಕಾಶ ದೊರಕ್ಕಿತ್ತು. ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಸಹ ಗಣೇಶ ವಿಸರ್ಜನಾ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ತಾಲೂಕು ಪಂಚಾಯಿತಿ ಸಿಬ್ಬಂದಿಗಳು ಗಣಪತಿಗೆ ವಿಶೇಷ ಪೂಜೆ ಸಲ್ಲಿಸಿ ಸಂಭ್ರಮದಿಂದ ವಿದಾಯ ಹೇಳಿದರು.

### ಬಸವ ಯೋಗ ಮಹಾವಿದ್ಯಾಲಯದಲ್ಲಿ ಕ್ರೀಡಾ ದಿನಾಚರಣೆ

# ವ್ಯಕ್ತಿಯ ಸಾಮರ್ಥ್ಯ ಹೆಚ್ಚಿಸಲು ಕ್ರೀಡೆಗಳು ಸಹಕಾರಿ




ಅಧ್ಯಕ್ಷತೆ ವಹಿಸಿದ್ದ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಕ್ರೀಡೆಗಳು ನಾಡಿನ ಅಭಿವೃದ್ಧಿಗೆ ಸಂಪನ್ಮೂಲಗಳಾಗಿವೆ. ಅವುಗಳನ್ನು ಸದುಪಯೋಗಪಡಿಸಿಕೊಂಡರೆ ಸದೃಢ, ಸಂಪದ್ಭರಿತ ನಾಡು ನಮ್ಮದಾಗುವುದು. ಹಾಕಿ ಮಾಂತ್ರಿಕ ಧ್ಯಾನಚಂದ್‌ರಂತಹ ಶ್ರೇಷ್ಠ ಕ್ರೀಡಾಪಟುಗಳು ನಮ್ಮ ದೇಶದ ಘನತೆ, ಗೌರಗಳನ್ನು ಹೆಚ್ಚಿಸಿದ್ದಾರೆ. ಈ ನಿಟ್ಟಿನಲ್ಲಿ ಹೆಚ್ಚು ಹೆಚ್ಚು ಶ್ರೇಷ್ಠ ಕ್ರೀಡಾಪಟುಗಳ ನಿರ್ಮಾಣ ಕಾರ್ಯ ಎಲ್ಲೆಡೆ ನಡೆದರೆ ಕ್ರೀಡಾ ದಿನಾಚರಣೆ ಸಾರ್ಥಗೊಳ್ಳುವದೆಂದು ಹೇಳಿದರು.

■ ವಿಜಯಸಾಕ್ಷಿ ಸುದ್ದಿ, ಗದಗ

ವ್ಯಕ್ತಿಯಲ್ಲಿ ಮೂಲಭೂತವಾಗಿ ಹಲವಾರು ಶಕ್ತಿ, ಸಾಮರ್ಥ್ಯಗಳು ಹುದುಗಿರುತ್ತವೆ. ಅವುಗಳ ವೃದ್ಧಿಗೆ ಪರಿಸರ ಸಹಕಾರಿಯಾಗಿದ್ದರೂ ಅಭಿವ್ಯಕ್ತಿಗೆ ಅವಕಾಶ ಬಹು ವಿರಳ. ಆದರೆ ಕ್ರೀಡೆಗಳು ಅಭಿವ್ಯಕ್ತಿಗೆ ಹೆಚ್ಚಿನ ಅವಕಾಶ ನೀಡುತ್ತವೆ. ಈ ಅವಕಾಶ ಉಪಯೋಗಿಸಿಕೊಳ್ಳುವ ಅಭಿಲಾಷೆಯಿಂದ ವ್ಯಕ್ತಿ ಕ್ರೀಡಾ ಸಾಧನೆಗೆ ಮುನ್ನಡೆಯುತ್ತಾನೆ. ವ್ಯಕ್ತಿಯ ಶಕ್ತಿ-ಸಾಮರ್ಥ್ಯ ಹೆಚ್ಚಿಸಲು ಕ್ರೀಡೆಗಳು ಹೆಚ್ಚು ಸಹಕಾರಿಯಾಗಿವೆ ಎಂದು ತೋಂಟದ ಸಿದ್ಧೇಶ್ವರ ಕಲಾ, ವಾಣಿಜ್ಯ, ವಿಜ್ಞಾನ ಪ.ಪೂ ಕಾಲೇಜು ಪ್ರಾಚಾರ್ಯ ವಾಯ್. ಎಸ್. ಮತ್ತೂರ ತಿಳಿಸಿದರು.

ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ನಡೆಸಿದ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಇಂದಿನ ದಿನಮಾನದಲ್ಲಿ ಯುವಕರು ಮತ್ತು ವಿದ್ಯಾರ್ಥಿಗಳಲ್ಲಿ ಕ್ರೀಡಾಸಕ್ತಿ ಕುಸಿಯುತ್ತಿದೆ. ಕಾರಣ ಹಲವಾರಿದ್ದರೂ ಪ್ರೋತ್ಸಾಹದ ಕೊರತೆ ಪ್ರಮುಖವಾಗಿದೆ. ಕ್ರೀಡೆ ಮತ್ತು ಕ್ರೀಡಾಪಟುಗಳಿಗೆ ಸರಕಾರ, ಸಮಾಜ ಬಾಂಧವರು ಹೆಚ್ಚಿನ ಪ್ರೋತ್ಸಾಹ ನೀಡಿದರೆ ಖಂಡಿತವಾಗಿಯೂ ಕ್ರೀಡಾ ಕ್ಷೇತ್ರ ಶ್ರೀಮಂತಗೊಳ್ಳುವದೆಂದು ಹೇಳಿದರು.

2024-25ನೇ ಸಾಲಿನ ಪಿ.ಜಿ. ಡಿಪ್ಲೋಮಾ ಇನ್ ಯೋಗ ಸ್ಟಡೀಜ್ ಕೋರ್ಸ್ ವಿದ್ಯಾರ್ಥಿಗಳ ಬೀಳ್ಕೊಡುವ ಸಮಾರಂಭ ಜರುಗಿತು. ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಯೋಗ ಕ್ರೀಡಾಪಡು ಅಕ್ಷತಾ ಕೊಣ್ಣೂರ ಇವರನ್ನು ಸನ್ಮಾನಿಸಲಾಯಿತು. ಅನಿಲಕುಮಾರ ಎಸ್.ಬಿ., ಗೀತಾ ಪೂಜಾರ, ವಿದ್ಯಾ ಮುಳ್ಳಾಳ ಇವರು ಯೋಗ ಕೋರ್ಸ್ ಮತ್ತು ಯೋಗ ಕಾಲೇಜಿನ ಪರಿಶ್ರಮ ಕುರಿತು ತಮ್ಮ ಅನಿಸಿಕೆ ತಿಳಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಪಿ. ಗೌಳಿ, ಉಪನ್ಯಾಸಕಿ ಕಲಾವತಿ ಸಂಕನಗೌಡ್ರ, ಗುರುಬಸವ ಸಿ.ಬಿ.ಎಸ್.ಇ ಶಾಲೆಯ ಸಂಗೀತ ಶಿಕ್ಷಕಿ ಸುನಂದಾ ಜ್ಞಾನೋಪಂತರ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಸವ ಯೋಗ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿ ವೃಂದದವರು ಪಾಲ್ಗೊಂಡಿದ್ದರು. ಸಪ್ನಾ ಹಿರೇಮಠ ಮತ್ತು ಸಂಗಡಿಗರು ಪ್ರಾರ್ಥನೆ ಹೇಳಿದರು. ಹೊನಕೇರಪ್ಪ ಮೇಟಿ ಸ್ವಾಗತಿಸಿದರು. ಅಶೋಕ ಬಾರಕೇರ ಕಾರ್ಯಕ್ರಮ ನಿರೂಪಿಸಿದರು. ನಿಂಬವ್ವಾ ತೇಲಸಂಗ ವಂದಿಸಿದರು.

## 'ಸಾಕ್ಷಿ ಮಾತುಕತೆ' ಲೋಕಾರ್ಪಣೆ ನಾಳೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ




ಪಟ್ಟಣದ ಬಸವೇಶ್ವರ ಸಿಬಿಎಸ್‌ಸಿ ಶಾಲೆಯಲ್ಲಿ 2ನೇ ತರಗತಿಯಲ್ಲಿ ಓದುತ್ತಿರುವ ಬಾಲಕಿ ಸಾಕ್ಷಿ ರವಿ ದೇವರಡ್ಡಿ ಈಗಾಗಲೆ ಲೇಖಕಿಯಾಗಿ ಹೊರಹೊಮ್ಮಿದ್ದಾಳೆ. ಅವಳು ಬರೆದಿರುವ 2ನೇ ಪುಸ್ತಕ 'ಸಾಕ್ಷಿ ಮಾತುಕತೆ' ಸೆ. 3ರಂದು ಮಧ್ಯಾಹ್ನ 2ಕ್ಕೆ ಇಲ್ಲಿನ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ಲೋಕಾರ್ಪಣೆಗೊಳ್ಳಲಿದೆ.

ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮೀಜಿ ವಹಿಸಲಿದ್ದು, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಅಧ್ಯಕ್ಷತೆ ವಹಿಸಲಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ, ಆಡಳಿತಾಧಿಕಾರಿ ಎನ್.ಆರ್. ಗೌಡರ, ಆಡಳಿತ ಮಂಡಳಿಯ ಸದಸ್ಯರಾದ ಡಾ. ಜಿ.ಕೆ. ಕಾಳೆ, ಸದಾಶಿವ ಕರಡಿ, ವಿ.ಬಿ. ಸೋಮನಕಟ್ಟಿಮಠ ಮತ್ತು ಪ್ರಾಚಾರ್ಯ ಬಿ.ಎಚ್. ಬಂಡಿಹಾಳ ಉಪಸ್ಥಿತರಿರುವರು.

ಹಿರಿಯ ಸಾಹಿತಿ ಚಂದ್ರಶೇಖರ ವಸ್ತ್ರದ, ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಲೇಖಕಿ ಮಮತಾ ಅರಸಿಕೇರಿ ಪುಸ್ತಕ ಪರಿಚಯ ಮಾಡಲಿದ್ದಾರೆ. ಶಿಕ್ಷಕ ಮಹೇಶ್ ಎಸ್.ಎಚ್. ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದು, ಲೇಖಕಿ ಸಾಕ್ಷಿ ದೇವರಡ್ಡಿ ಉಪಸ್ಥಿತರಿರುವರು ಎಂದು ತಿಳಿಸಿರುವ ನರೇಗಲ್ಲ ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಈ ಸಮಾರಂಭವು ಎಸ್‌ಎವಿವಿಪಿ ಸಮಿತಿ ನರೇಗಲ್ಲ, ಬಸವೇಶ್ವರ ಸಿಬಿಎಸ್‌ಸಿ ನರೇಗಲ್ಲ ಮತ್ತು ಕಸಾಪ ಹೋಬಳಿ ಘಟಕ ನರೇಗಲ್ಲ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜರುಗಲಿದೆ ಎಂದು ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ; ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಗದಗ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆ. 3 ಮತ್ತು 4 ರಂದು ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗದಲ್ಲಿ ಬೆಳಿಗ್ಗೆ 09-00 ಗಂಟೆಯಿಂದ ಆಯೋಜಿಸಲಾಗಿದ್ದು,

ತಾಲೂಕು ಹಂತಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಗಳಿಸಿದ ಪುರುಷ ಹಾಗೂ ಮಹಿಳಾ ಕ್ರೀಡಾಪಟುಗಳು ಮಾತ್ರ ಕಡ್ಡಾಯವಾಗಿ ಈಗಾಗಲೇ ತಾಲೂಕಾ ಹಂತದಲ್ಲಿ https://dasarac-mcup-2025.etrpindia.com/KA-sports ಲಿಂಕ್ ಮುಖಾಂತರ ಈ ಕೆಳಕಾಣಿಸಿದ ಕೋಡ್ ಬಳಸಿ ಹೆಸರನ್ನು ನೊಂದಾಯಿಸಿ ಭಾಗಹಿಸುವುದು ಕಡ್ಡಾಯವಾಗಿದೆ.

ತಾಲೂಕಾ ಹಂತದಲ್ಲಿ ವಿಜೇತ ಕ್ರೀಡಾಪಟುಗಳು ಮಾತ್ರ ಜಿಲ್ಲಾ ಹಂತದಲ್ಲಿ ಆನ್ಲೈನ್ ಲಿಂಕ್ ಮುಖಾಂತರ ನೋಂದಣಿಯನ್ನು ಕ್ಲಿಕ್ ಮಾಡಿ ತಮ್ಮ ಬ್ಯಾಂಕ್ ಖಾತೆಯನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ ಶರಣು ಗೋಗೇರಿ ತಿಳಿಸಿದ್ದಾರೆ.

**ಷರತ್ತುಗಳು:** ತಾಲೂಕು ಮಟ್ಟದಲ್ಲಿ ನಡೆದ ಕ್ರೀಡೆಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ನಡೆದ ಕ್ರೀಡೆಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳಿಗೆ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ದಸರಾ ಕ್ರೀಡಾಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳು ಮಾತ್ರ ಅರ್ಹರಿರುತ್ತಾರೆ.

ಕ್ರೀಡಾಕೂಟದಲ್ಲಿ ರಕ್ಷಣಾಪಡೆ, ಅರೆ ರಕ್ಷಣಾಪಡೆ ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅರ್ಹರಲ್ಲ. ಒಬ್ಬ ಕ್ರೀಡಾಪಟು ಅಥವಾ ತಂಡ ಯಾವುದೇ ಜಿಲ್ಲೆಯಲ್ಲಿ ಒಂದು ಬಾರಿ ತಾಲೂಕು ಅಥವಾ ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿದ ನಂತರ ಬೇರೆ ಯಾವುದೇ ಜಿಲ್ಲೆಯ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶ ಇರುವುದಿಲ್ಲ. ಅಂತಹ ಪ್ರಕರಣವೇನಾದರೂ ದಾಖಲಾದಲ್ಲಿ ಅಥವಾ ಗಮನಕ್ಕೆ ಬಂದಲ್ಲಿ ತೀವ್ರ ಶಿಸ್ತಿನ ಕ್ರಮ ಕ್ರಮಕೈಗೊಳ್ಳಲಾಗುವುದು. ಈ ಸಂಬಂಧ ಸಹಾಯಕ ನಿರ್ದೇಶಕರು ಕೈಗೊಳ್ಳುವ ತೀರ್ಮಾನವೇ ಅಂತಿಮವಾಗಿರುತ್ತದೆ.

ಜಿಲ್ಲಾ ಮಟ್ಟದಲ್ಲಿ ಟೆನ್ನಿಸ್ , ನೆಟ್ ಬಾಲ್ ಹಾಗೂ ಈಜು ಸ್ಪರ್ಧೆಗಳಲ್ಲಿ ನೇರವಾಗಿ ಭಾಗವಹಿಸಲು ಸಹಿತ ಲಿಂಕ್ ನಲ್ಲಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ 08372-238345 ಗೆ ಸಂಪರ್ಕಿಸಲು ಕೋರಿದೆ.

## 'ಅಂಗೈಯಲ್ಲಿ ಆರೋಗ್ಯ' ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದಿಂದ ಲಿಂ. ಶ್ರೀ ಸಂಗನಬಸಯ್ಯ ನಿಂಗಯ್ಯ ಮದರಿಮಠ ಇವರ ಸ್ಮಾರಕ ದತ್ತಿ ಉಪನ್ಯಾಸದ ನಿಮಿತ್ತ 'ಅಂಗೈಯಲ್ಲಿ ಆರೋಗ್ಯ' ಕುರಿತು ವಿಚಾರ ಸಂಕಿರಣವನ್ನು ಸೆ.2ರಂದು ಸಾಯಂಕಾಲ 5 ಗಂಟೆಗೆ ಸಂಸ್ಥೆಯ ಶ್ರೀ ಬಸನಪ್ಪ ಸಂಕಪ್ಪ ಸಂಕಣ್ಣವರ ಸಭಾ ಭವನದಲ್ಲಿ ಆಯೋಜಿಸಲಾಗಿದೆ.

ಅಕ್ಯುಪ್ರೆಶರ್ ಆ್ಯಂಡ ಕಲರ್ ಥೆರೆಫಿಯ ಅನುಷಾ ಮುದಗಲ್ ಆಗಮಿಸಿ ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಅಧ್ಯಕ್ಷರಾದ ನಂದಾ ಚಂದ್ರು ಬಾಳಿಹಳ್ಳಿಮಠ ವಹಿಸುವರು. ಸಂಸ್ಥೆಯ ದತ್ತಿ ಉಪನ್ಯಾಸ ಉಪ ಸಮಿತಿ ಚೇರಮನ್ ಚಂದ್ರು ಬಾಳಿಹಳ್ಳಿಮಠ, ಮಹಿಳಾ ಘಟಕದ ಉಪಾಧ್ಯಕ್ಷರಾದ ದೀಪಾ ಎಸ್.ಗದಗ, ಸುಷ್ಮಾ ಎಸ್.ಜಾಲಿ, ಸುಜಾತಾ ಎಸ್.ಗುಡಿಮನಿ, ಸಹ ಗೌರವ ಕಾರ್ಯದರ್ಶಿಗಳಾದ ಲಲಿತಾ ಜಿ.ತಡಸದ, ಸುಧಾ ಸಿ.ಹುಣಸಿಕಟ್ಟಿ ಹಾಗೂ ಕೋಶಾಧ್ಯಕ್ಷರಾದ ಪೂರ್ಣಿಮಾ ಕೆ.ಆಟದ ಪಾಲ್ಗೊಳ್ಳುವರು. ಸಂಸ್ಥೆಯ ಮಹಿಳಾ ಘಟಕದ ಸದಸ್ಯರು, ದತ್ತಿ ಉಪನ್ಯಾಸದ ಕುಟುಂಬ ವರ್ಗದವರು, ಸ್ನೇಹಿತರು ಆಗಮಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಸಂಸ್ಥೆಯ ಮಹಿಳಾ ಘಟಕದ ಗೌರವ ಕಾರ್ಯದರ್ಶಿಗಳಾದ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಪುರಸಭೆ ಕಾರ್ಯಾಲಯ, ಲಕ್ಷ್ಮೇಶ್ವರ

ತಾ: ಲಕ್ಷ್ಮೇಶ್ವರ ಜಿ: ಗದಗ

mail: itstaff_ulb_laxmeshwar@yahoo.co.in Phone:08487-272916
Website:www.lakmishwaratown.mrc.gov.in Fax no:08487-272916

ಕಂ/ಪುಸಲ/ತಾಂ.ವಿ/ಇ-ಟೆಂಡರ್/ಎಸ್.ಎಫ್.ಸಿ & ಸ್ಥನಿ/ವಹಿ/2025-26 ದಿ: 29-08-2025

**ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ-ಪ್ರೋಕ್ಯೂರಮೆಂಟ್ ಮೂಲಕ)**

ಲಕ್ಷ್ಮೇಶ್ವರ ಪುರಸಭೆಯ ಸನ್ 2025-26 ನೇ ಸಾಲಿನ ಎಸ್.ಎಫ್.ಸಿ ಮತ್ತು ಸ್ಥಳೀಯ ಸಂಸ್ಥೆಯ ನಿಧಿಯಲ್ಲಿ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯ ಅನುದಾನದಲ್ಲಿ ಒಟ್ಟು 4 ಕಾಮಗಾರಿ ಅಂದಾಜು ಮೊತ್ತ **ರೂ 11.43 ಲಕ್ಷ**ಗಳಿಗೆ ಕೆ.ಟಿ.ಟಿ.ಪಿ ಕಾಯ್ದೆ ಅಧಿನಿಯಮ 2000 ರನ್ವಯ ಈ ಕೆಳಗಿನಂತೆ ಇಂಡಂಟ್‌ಗಳಲ್ಲಿ ಇ-ಟೆಂಡರ್‌ಗಳನ್ನು ಆಹ್ವಾನಿಸಿದ್ದು ಅರ್ಹ ಬಿಡ್‌ದಾರರು ಟೆಂಡರ್‌ನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್ **https://kppp.karnataka.gov.in** ಠೇವಣಿ (ಇಎಂಡಿ) ಮತ್ತು ಟೆಂಡರ್ ಫೀಯನ್ನು ಇ-ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಿದಂತೆ ಪಾವತಿಸಿ ಭಾಗವಹಿಸಬಹುದಾಗಿದೆ. ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 08-09-2025 ರ ಸಂಜೆ 4.00** ಗಂಟೆಯವರೆಗೆ ಟೆಂಡರ್ ದಿನಾಂಕಗಳನ್ನು ನಿಗಧಿಪಡಿಸಲಾಗಿದೆ ಹಾಗೂ ಟೆಂಡರ್‌ಗೆ ಸಂಬಂಧಿಸಿದ ಯಾವುದೇ ಬದಲಾವಣೆಗಳು ಅಥವಾ ತಿದ್ದುಪಡಿಗಳನ್ನು E-portal ನಲ್ಲಿ ಪ್ರಕಟಿಸಲಾಗುವುದು.

| ಅ. ನಂ. | ಕಾಮಗಾರಿಯ ಇಂಡೆಂಟ್ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | DMA/2025-26/RD/WORK_INDENT47969 | 3.90 |
| 2 | DMA/2025-26/RD/WORK_INDENT47971 | 4.48 |
| 3 | DMA/2025-26/OW/WORK_INDENT47972 | 1.92 |
| 4 | DMA/2025-26/RD/WORK_INDENT47973 | 1.13 |

ಸಹಿ/-(ಶ್ರೀ ಮಹಂತೇಶ ಹೆಚ್ ಬೀಳಗಿ) ಮುಖ್ಯಾಧಿಕಾರಿ ಪುರಸಭೆ ಲಕ್ಷ್ಮೇಶ್ವರ

ಸಹಿ/- (ಶ್ರೀಮತಿ ಯಲ್ಲವ್ವ ಗಂ ದುರಗಣ್ಣವರ) ಅಧ್ಯಕ್ಷರು ಪುರಸಭೆ ಲಕ್ಷ್ಮೇಶ್ವರ

ವಾ.ಸಾ.ಇ/ಗದಗ/258/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka